ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 130 Thursday **05-11-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 130 ಗುರುವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ರಸ್ತೆ ಬದಿಯ ಹುಣಸೆ ಮರಗಳಲ್ಲಿ ಸಮೃದ್ಧ ಫಸಲು; ಕಟಾವಿಗೆ ಸಜ್ಜು

ಜಗಳೂರು: ಅರಣ್ಯ ಇಲಾಖೆಯಿಂದ ನೆಡಲಾದ 4,700 ಮರಗಳಲ್ಲಿ ಉತ್ತಮ ಇಳುವರಿ ನಿರೀಕ್ಷೆ

"ಮುಂಜಾನೆಯ ಮೆರಗು"

ಜಗಳೂರು ನ, 04– ತಾಲ್ಲೂಕಿನ ವಿವಿಧ ಪ್ರಮುಖ ರಸ್ತೆ ಮಾರ್ಗಗಳ ಇಕ್ಕೆಲಗಳಲ್ಲಿ ಅರಣ್ಯ ಇಲಾಖೆ ಬೆಳೆಸಿರುವ ಹುಣಸೆ ಮರಗಳು ಈ ಬಾರಿ ಸಮೃದ್ಧವಾಗಿ ಬೆಳೆದು ನಿಂತಿದ್ದು, ಮೈತುಂಬಾ ಕಾಯಿಗಳನ್ನು ಹೊತ್ತು ಕಟಾವಿನ ಹಂತಕ್ಕೆ ತಲುಪಿವೆ. ಹಸಿರಿನಿಂದ ಕಂಗೊಳಿಸುತ್ತಿರುವ ಮರಗಳ ಮೇಲೆ ಗೊಂಚಲು ಗೊಂಚಲಾಗಿ ಬಿಟ್ಟಿರುವ ಹುಣಸೆ ಕಾಯಿಗಳು ವಾಹನ ಸವಾರರು ಹಾಗೂ ಸಾರ್ವಜನಿಕರ ಗಮನ ಸೆಳೆಯುತ್ತಿವೆ.

ತಾಲ್ಲೂಕಿನ ಅರಬಾವಿ–ಚಳ್ಳಕೆರೆ, ಉಜ್ಜಿನಿ–ಲಕ್ಕಂಪುರ, ಗೌರಿಪುರ–ಭೀಮವ್ವ ನಾಗತಿಹಳ್ಳಿ, ಕಮ್ಮಡಲುಗುಂದಿ–ಮಲ್ಲಾಪುರ, ಬಿಳಿಚೋಡು–ಜಗಳೂರು, ಬಿದರಕೆರೆ–ಜಗಳೂರು ಹಾಗೂ ತುಪ್ಪದಹಳ್ಳಿ–ಗಡಿಮಾಕುಂಟೆ ಸೇರಿದಂತೆ ವಿವಿಧ ರಸ್ತೆ ಮಾರ್ಗಗಳ ಎರಡೂ ಬದಿಗಳಲ್ಲಿ ಅರಣ್ಯ ಇಲಾಖೆ ವತಿಯಿಂದ ಸುಮಾರು 4,700 ಹುಣಸೆ ಮರಗಳನ್ನು ಬೆಳೆಸಲಾಗಿದೆ. ಇದೀಗ ಈ ಮರಗಳು ಉತ್ತಮವಾಗಿ ಬೆಳೆದು ಸಮೃದ್ಧವಾಗಿ ಕಾಯಿ ಬಿಟ್ಟಿದ್ದು, ಇನ್ನೇನು ಕೆಲವೇ ದಿನಗಳಲ್ಲಿ ಕಟಾವಿಗೆ



ಸಿದ್ಧವಾಗಲಿವೆ.

ಕಡಿಮೆ ನೀರಿನಲ್ಲೂ ಸಮೃದ್ಧ ಬೆಳವಣಿಗೆ

ಜಗಳೂರು ತಾಲ್ಲೂಕು ಬರಪೀಡಿತ ಪ್ರದೇಶವಾಗಿದ್ದು, ಕಡಿಮೆ ಮಳೆ ಹಾಗೂ ನೀರಿನ ಕೊರತೆಯ ನಡುವೆಯೂ ಹುಣಸೆ ಮರಗಳು ಉತ್ತಮವಾಗಿ ಬೆಳೆಯುತ್ತಿರುವುದು ವಿಶೇಷವಾಗಿದೆ. ಹೆಚ್ಚು ನೀರಿನ ಅವಶ್ಯಕತೆ ಇಲ್ಲದೆ ಒಣ ಹವಾಮಾನಕ್ಕೂ ಹೊಂದಿಕೊಳ್ಳುವ ಸಾಮರ್ಥ್ಯ ಹೊಂದಿರುವ ಹುಣಸೆ ಮರಗಳು ಪರಿಸರ ಸಂರಕ್ಷಣೆಯ ಜೊತೆಗೆ ಅರಣ್ಯ ಇಲಾಖೆಗೆ ಆದಾಯದ ಮೂಲವಾಗಿಯೂ ರೂಪುಗೊಂಡಿವೆ.

ರಸ್ತೆಯ ಇಕ್ಕೆಲಗಳಲ್ಲಿ ಬೆಳೆದಿರುವ ಈ ಮರಗಳು ನೆರಳು ನೀಡುವುದರ ಜೊತೆಗೆ ಇಂಗಾಲದ ಡೈಆಕ್ಸೈಡ್ ಹೀರಿಕೊಂಡು ಪರಿಸರ ಸಮತೋಲನ ಕಾಪಾಡಲು ಸಹಕಾರಿಯಾಗಿವೆ. ಬೇಸಿಗೆಯ ಬಿಸಿಲಿನಲ್ಲಿ ಪ್ರಯಾಣಿಕರಿಗೆ ತಂಪಾದ ನೆರಳನ್ನೂ ಒದಗಿಸುತ್ತಿವೆ.

ಹರಾಜು ಪ್ರಕ್ರಿಯೆಗೆ ಅರಣ್ಯ ಇಲಾಖೆ ಸಿದ್ಧತೆ

ಕಳೆದ ಎರಡು ವರ್ಷಗಳ ಹಿಂದೆ ಹುಣಸೆ ಹಣ್ಣಿನ ಕಟಾವು ಮತ್ತು ಮಾರಾಟಕ್ಕೆ ಸಂಬಂಧಿಸಿದಂತೆ ಹರಾಜು ಪ್ರಕ್ರಿಯೆ ನಡೆಸಲಾಗಿತ್ತು. ಈ ಬಾರಿಯೂ ಮರಗಳಲ್ಲಿ ಉತ್ತಮ ಫಸಲು ಬಂದಿರುವ ಹಿನ್ನೆಲೆಯಲ್ಲಿ ಹರಾಜು ಪ್ರಕ್ರಿಯೆ ಕೈಗೊಳ್ಳಲು ಅರಣ್ಯ ಇಲಾಖೆ ಸಿದ್ಧತೆ ನಡೆಸುತ್ತಿದೆ ಎಂದು ವಲಯ ಅರಣ್ಯಾಧಿಕಾರಿ (ಆರ್‌ಎಫ್‌ಒ) ನಿತಿನ್ ಬಲ್ಲವಾರ್ ತಿಳಿಸಿದ್ದಾರೆ.

ಹುಣಸೆ ಹಣ್ಣಿಗೆ ಮಾರುಕಟ್ಟೆಯಲ್ಲಿ ಉತ್ತಮ ಬೇಡಿಕೆ

ಹುಣಸೆ ಹಣ್ಣು ಕೇವಲ ಅಡುಗೆಗೆ ಬಳಸುವ ಪದಾರ್ಥವಷ್ಟೇ ಅಲ್ಲದೆ, ಆಹಾರ ಸಂಸ್ಕರಣಾ ಉದ್ಯಮದಲ್ಲಿಯೂ ಪ್ರಮುಖ ಸ್ಥಾನ ಪಡೆದಿದೆ. ಹುಣಸೆ ಹಣ್ಣಿನ ತಿರುಳು, ನಾರು, ಸಿಪ್ಪೆ ಹಾಗೂ ಬೀಜಗಳಿಗೂ ವಿವಿಧ ರೀತಿಯ ಬಳಕೆಯಿದೆ. ಸಾಂಬಾರು, ಗೊಜ್ಜು, ಚಟ್ನಿ, ಹುಣಸೆ ರಸ ಸೇರಿದಂತೆ ಹಲವು ಆಹಾರ ಪದಾರ್ಥಗಳ ತಯಾರಿಕೆಯಲ್ಲಿ ಹುಣಸೆ ಹಣ್ಣು ಪ್ರಮುಖ ಪಾತ್ರ ವಹಿಸುತ್ತದೆ.

ಹುಣಸೆ ಹಣ್ಣಿನಲ್ಲಿ ನಾರಿನಂಶ, ಟಾರ್ಟಾರಿಕ್ ಆಮ್ಲ ಹಾಗೂ ಪೊಟ್ಯಾಷಿಯಂ, ಮೆಗ್ನೀಷಿಯಂ



ಸೇರಿದಂತೆ ವಿವಿಧ ಖನಿಜಾಂಶಗಳಿವೆ. ಆಹಾರ ಪದಾರ್ಥಗಳಿಗೆ ಹುಳಿ ರುಚಿ ನೀಡುವ ಹುಣಸೆ ಹಣ್ಣಿಗೆ ವರ್ಷವಿಡೀ ಮಾರುಕಟ್ಟೆಯಲ್ಲಿ ಬೇಡಿಕೆ ಇರುತ್ತದೆ. ಒಣಗಿಸಿದ ಹುಣಸೆ ತಿರುಳನ್ನು ಸಂಗ್ರಹಿಸಿಡಲು ಸಾಧ್ಯವಾಗುವುದರಿಂದ ವ್ಯಾಪಾರಿಗಳೂ ಹೆಚ್ಚಿನ ಆಸಕ್ತಿ ತೋರುತ್ತಾರೆ.

ಒಟ್ಟಿನಲ್ಲಿ, ರಸ್ತೆ ಬದಿಯಲ್ಲಿ ಬೆಳೆಸಿರುವ 4,700 ಹುಣಸೆ ಮರಗಳು ಪರಿಸರ ಸಂರಕ್ಷಣೆಯ ಜೊತೆಗೆ ಅರಣ್ಯ ಇಲಾಖೆಗೆ ಆದಾಯ ತಂದುಕೊಡುವ ಸಂಪನ್ಮೂಲಗಳಾಗಿವೆ. ಸೂಕ್ತ ನಿರ್ವಹಣೆ, ಕಾಲಕಾಲಕ್ಕೆ ಕಟಾವು ಹಾಗೂ ವೈಜ್ಞಾನಿಕ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಿದರೆ ಮುಂದಿನ ದಿನಗಳಲ್ಲಿ ಇವು ತಾಲ್ಲೂಕಿನ ಹಸಿರು ಸಂಪತ್ತಿನ ಜೊತೆಗೆ ಆರ್ಥಿಕ ಸಂಪತ್ತಾಗಿಯೂ ಬೆಳೆಯಲಿವೆ.

ಜಗಳೂರು ಕ್ಷೇತ್ರದ ಅಭಿವೃದ್ಧಿ ಕಾರ್ಯಗಳಿಗೆ ಅಗತ್ಯ ಸಹಕಾರ: ಸಚಿವ ಟಿ. ರಘುಮೂರ್ತಿ ಭರವಸೆ

"ಮುಂಜಾನೆಯ ಮೆರಗು"

ಜಗಳೂರು ನ, 04– ಚಳ್ಳಕೆರೆ ನಗರದಲ್ಲಿ ಸಾರಿಗೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವ ಟಿ. ರಘುಮೂರ್ತಿ ಅವರನ್ನು ಕೆಪಿಸಿಸಿ ಪರಿಶಿಷ್ಟ ಪಂಗಡ (ಎಸ್‌ಟಿ) ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಎಂ.ಡಿ. ಕೀರ್ತಿಕುಮಾರ್ ಭೇಟಿ ಮಾಡಿ ಜಗಳೂರು ವಿಧಾನಸಭಾ ಕ್ಷೇತ್ರದ ಸಮಗ್ರ ಅಭಿವೃದ್ಧಿ ಹಾಗೂ ವಿವಿಧ ಜನಪರ ಕಾಮಗಾರಿಗಳ ಕುರಿತು ಚರ್ಚೆ ನಡೆಸಿದರು.



ಈ ಸಂದರ್ಭದಲ್ಲಿ ಕ್ಷೇತ್ರದಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾರ್ಯಗಳು, ಗ್ರಾಮೀಣ ಪ್ರದೇಶಗಳ ಮೂಲಸೌಕರ್ಯಗಳ ಸುಧಾರಣೆ, ರಸ್ತೆ, ಕುಡಿಯುವ ನೀರು, ಶಿಕ್ಷಣ ಸೇರಿದಂತೆ ಸಾರ್ವಜನಿಕರಿಗೆ ಅಗತ್ಯವಿರುವ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಸಚಿವರ ಗಮನ ಸೆಳೆದರು. ಮೀಸಲು ವಿಧಾನಸಭಾ ಕ್ಷೇತ್ರವಾಗಿರುವ ಜಗಳೂರಿನಲ್ಲಿ ಮತ್ತಷ್ಟು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಸರ್ಕಾರದ ಮಟ್ಟದಲ್ಲಿ ಅಗತ್ಯ ಸಹಕಾರ ಮತ್ತು ಅನುದಾನ ಒದಗಿಸುವಂತೆ ಮನವಿ ಮಾಡಿದರು.

ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಸಚಿವ ಟಿ. ರಘುಮೂರ್ತಿ ಅವರು, ಜಗಳೂರು ವಿಧಾನಸಭಾ ಕ್ಷೇತ್ರದಲ್ಲಿ ಉತ್ತಮ ರೀತಿಯಲ್ಲಿ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿದ್ದು, ಇದೇ ರೀತಿಯ ಜನಪರ ಕೆಲಸಗಳು ನಿರಂತರವಾಗಿ ಮುಂದುವರಿಯಬೇಕು. ಕ್ಷೇತ್ರದ ಅಭಿವೃದ್ಧಿಗೆ ಶಾಸಕರು ಹಾಗೂ ಪಕ್ಷದ ಮುಖಂಡರು ಕೈಗೊಳ್ಳುತ್ತಿರುವ ಪ್ರಯತ್ನಗಳಿಗೆ ಅಗತ್ಯ ಬೆಂಬಲ ನೀಡಲಾಗುವುದು. ಕ್ಷೇತ್ರಕ್ಕೆ ಅವಶ್ಯವಿರುವ ಅಭಿವೃದ್ಧಿ ಕಾಮಗಾರಿಗಳಿಗೆ ಸರ್ಕಾರದ ಮಟ್ಟದಲ್ಲಿ ಸಾಧ್ಯವಾದಷ್ಟು ಸಹಕಾರ ಒದಗಿಸಲಾಗುವುದು ಎಂದು ಭರವಸೆ ನೀಡಿದರು.

ನಂತರ ಮಾತನಾಡಿದ ಎಂ.ಡಿ. ಕೀರ್ತಿಕುಮಾರ್, ಜಗಳೂರು ಕ್ಷೇತ್ರವು ಹಿಂದುಳಿದ ಹಾಗೂ ಮೀಸಲು ಕ್ಷೇತ್ರವಾಗಿದ್ದು, ಇಲ್ಲಿನ ಜನರ ಬಹುದಿನಗಳ ಅಭಿವೃದ್ಧಿ ನಿರೀಕ್ಷೆಗಳನ್ನು ಈಡೇರಿಸುವ ನಿಟ್ಟಿನಲ್ಲಿ ಹೆಚ್ಚಿನ ಅನುದಾನ ಮತ್ತು ಯೋಜನೆಗಳ ಅಗತ್ಯವಿದೆ. ಗ್ರಾಮೀಣ ಭಾಗದ ಜನರ ಮೂಲಭೂತ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವುದು ಹಾಗೂ ಕ್ಷೇತ್ರವನ್ನು ಅಭಿವೃದ್ಧಿಯ ಪಥದಲ್ಲಿ ಮುನ್ನಡೆಸುವುದು ನಮ್ಮ ಉದ್ದೇಶವಾಗಿದೆ. ಈ ಹಿನ್ನೆಲೆಯಲ್ಲಿ ಸಚಿವರನ್ನು ಭೇಟಿ ಮಾಡಿ ಕ್ಷೇತ್ರದ ಅಭಿವೃದ್ಧಿಗೆ ಸಹಕಾರ ಕೋರಿದ್ದು, ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿರುವುದು ಸಂತಸ ತಂದಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ರೋಗಿಗಳಿಗೆ ಸಕಾಲಕ್ಕೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸಿ: ತಾಲೂಕು ಆರೋಗ್ಯಾಧಿಕಾರಿ ವಿಶ್ವನಾಥ್

"ಮುಂಜಾನೆಯ ಮೆರಗು"

ಜಗಳೂರು ನ, 04– ಆಸ್ಪತ್ರೆಗೆ ಚಿಕಿತ್ಸೆಗಾಗಿ ಬರುವ ಪ್ರತಿಯೊಬ್ಬ ರೋಗಿಗೂ ಯಾವುದೇ ವಿಳಂಬವಿಲ್ಲದೆ ಸಕಾಲಕ್ಕೆ ಉತ್ತಮ ಹಾಗೂ ಗುಣಮಟ್ಟದ ವೈದ್ಯಕೀಯ ಸೇವೆ ಒದಗಿಸುವ ಮೂಲಕ ಆರೋಗ್ಯ ಸಿಬ್ಬಂದಿ ಜನರ ವಿಶ್ವಾಸ ಗಳಿಸಬೇಕು ಎಂದು ತಾಲೂಕು ಆರೋಗ್ಯಾಧಿಕಾರಿ ವಿಶ್ವನಾಥ್ ಸಿಬ್ಬಂದಿಗಳಿಗೆ ಸೂಚನೆ ನೀಡಿದರು.

ಬುಧವಾರ ತಾಲೂಕಿನ ಬಿಳಿಚೋಡು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಆಸ್ಪತ್ರೆಯ ಆವರಣ, ವಿವಿಧ ವಿಭಾಗಗಳು, ಔಷಧ ಸಂಗ್ರಹಣೆ ಹಾಗೂ ಸ್ವಚ್ಛತಾ ವ್ಯವಸ್ಥೆಯನ್ನು ಪರಿಶೀಲಿಸಿದ ಬಳಿಕ ಅವರು ಮಾತನಾಡಿದರು.

ಗ್ರಾಮೀಣ ಪ್ರದೇಶದ ಜನರಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳೇ ಪ್ರಮುಖ ಆರೋಗ್ಯ ಸೇವಾ ಕೇಂದ್ರಗಳಾಗಿವೆ. ಆದ್ದರಿಂದ ವೈದ್ಯರು ಹಾಗೂ ಆರೋಗ್ಯ ಸಿಬ್ಬಂದಿ ತಮ್ಮ ಕರ್ತವ್ಯವನ್ನು ಜವಾಬ್ದಾರಿಯಿಂದ ನಿರ್ವಹಿಸಬೇಕು. ಆಸ್ಪತ್ರೆಗೆ ಬರುವ ರೋಗಿಗಳಿಗೆ ಸೌಜನ್ಯದಿಂದ ಸ್ಪಂದಿಸಿ, ಅವರ ಆರೋಗ್ಯ ಸಮಸ್ಯೆಗಳನ್ನು ಆಲಿಸಿ ಸೂಕ್ತ



ಚಿಕಿತ್ಸೆ ನೀಡಬೇಕು. ಅಗತ್ಯ ಔಷಧಗಳು ಸದಾ ಲಭ್ಯವಿರುವಂತೆ ನೋಡಿಕೊಳ್ಳಬೇಕು. ವೈದ್ಯಕೀಯ ಸೇವೆಯಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯ ತೋರಬಾರದು ಎಂದು ತಿಳಿಸಿದರು.

ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯಾಪ್ತಿಗೆ ಬರುವ ಗ್ರಾಮಗಳಲ್ಲಿ ಸೊಳ್ಳೆಗಳ ಉತ್ಪತ್ತಿ ತಡೆಗಟ್ಟಲು ಲಾರ್ವಾ ಸಮೀಕ್ಷೆಯನ್ನು ಸಮರ್ಪಕವಾಗಿ ಕೈಗೊಳ್ಳಬೇಕು. ಮನೆಗಳ ಸುತ್ತಮುತ್ತಲಿನ ನೀರಿನ ತೊಟ್ಟಿಗಳು, ತೆರೆದ ಪಾತ್ರೆಗಳು, ಟೈರ್‌ಗಳು ಹಾಗೂ ನೀರು ನಿಲ್ಲುವ ಸ್ಥಳಗಳನ್ನು ಪರಿಶೀಲಿಸಿ ಲಾರ್ವಾ ಉತ್ಪತ್ತಿಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ಸಾಂಕ್ರಾಮಿಕ ರೋಗಗಳು ಹರಡುವುದನ್ನು ತಡೆಯಲು ಆರೋಗ್ಯ ಇಲಾಖೆ ಸಿಬ್ಬಂದಿ ನಿರಂತರವಾಗಿ ಜಾಗೃತಿ ಮೂಡಿಸಬೇಕು ಎಂದರು.

ಲಾರ್ವಾ ಸಮೀಕ್ಷೆ ಹಾಗೂ ಆರೋಗ್ಯ ಜಾಗೃತಿ ಕಾರ್ಯಕ್ಕೆ ಗ್ರಾಮಸ್ಥರು ಸಂಪೂರ್ಣ ಸಹಕಾರ ನೀಡಬೇಕು. ಆರೋಗ್ಯ ಸಿಬ್ಬಂದಿ ಮನೆಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಅಗತ್ಯ ಮಾಹಿತಿ ನೀಡಿ, ತಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಮೂಲಕ ಸಾರ್ವಜನಿಕರೂ ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಆಸ್ಪತ್ರೆಯ ಒಳಾಂಗಣ ಮತ್ತು ಹೊರಾಂಗಣದಲ್ಲಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಕುಡಿಯುವ ನೀರು, ಶೌಚಾಲಯ ಹಾಗೂ ಆಸ್ಪತ್ರೆಯ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ರೋಗಿಗಳಿಗೆ ಉತ್ತಮ ವಾತಾವರಣ ಕಲ್ಪಿಸುವುದರ ಜತೆಗೆ ಆರೋಗ್ಯ ಕೇಂದ್ರದ ಮೂಲಸೌಕರ್ಯಗಳ ಸಮರ್ಪಕ ನಿರ್ವಹಣೆ ಮಾಡಬೇಕು ಎಂದು ಸಿಬ್ಬಂದಿಗಳಿಗೆ ನಿರ್ದೇಶನ ನೀಡಿದರು.

ಗ್ರಾಮೀಣ ಜನರಿಗೆ ಉತ್ತಮ ಆರೋಗ್ಯ ಸೇವೆ ತಲುಪಿಸುವುದು ಇಲಾಖೆಯ ಪ್ರಮುಖ ಉದ್ದೇಶವಾಗಿದ್ದು, ಈ ನಿಟ್ಟಿನಲ್ಲಿ ಪ್ರತಿಯೊಬ್ಬ ಸಿಬ್ಬಂದಿಯೂ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ ಪಾದಯಾತ್ರೆ ಮಾಜಿ ಶಾಸಕ ಎಚ್.ಪಿ. ರಾಜೇಶ್

"ಮುಂಜಾನೆಯ ಮೆರಗು"

ಜಗಳೂರು ನ, 04– ಚಿತ್ರದುರ್ಗದಲ್ಲಿ ಭಾರತೀಯ ಜನತಾ ಪಕ್ಷದ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ 'ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ' ಎಂಬ ಘೋಷವಾಕ್ಯದಡಿ ನಡೆದ ಪಾದಯಾತ್ರೆಯಲ್ಲಿ ಜಗಳೂರು ಕ್ಷೇತ್ರದ ಮಾಜಿ ಶಾಸಕ ಎಚ್.ಪಿ. ರಾಜೇಶ್ ಅವರು ಭಾಗವಹಿಸಿದರು.



ರಾಜ್ಯದಲ್ಲಿ ಪ್ರಜಾಪ್ರಭುತ್ವದ ಮೌಲ್ಯಗಳ ರಕ್ಷಣೆ ಹಾಗೂ ಆಡಳಿತ ವ್ಯವಸ್ಥೆಯಲ್ಲಿನ ಅರಾಜಕತೆಯನ್ನು ಖಂಡಿಸುವ ಉದ್ದೇಶದಿಂದ ಬಿಜೆಪಿ ವತಿಯಿಂದ ಪಾದಯಾತ್ರೆ ಆಯೋಜಿಸಲಾಗಿತ್ತು. ಪಕ್ಷದ ಮುಖಂಡರು, ಜನಪ್ರತಿನಿಧಿಗಳು ಹಾಗೂ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಪಕ್ಷದ ಪರವಾಗಿ ಘೋಷಣೆಗಳನ್ನು ಕೂಗಿದರು.

ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯ ಉಸ್ತುವಾರಿ ಹರೀಶ್ ದ್ವಿವೇದಿ, ಮಾಜಿ ಉಪಮುಖ್ಯಮಂತ್ರಿ ಹಾಗೂ ಸಂಸದ ಗೋವಿಂದ ಕಾರಜೋಳ, ಮಾಜಿ ಕೇಂದ್ರ ಸಚಿವರಾದ ಜಿ.ಎಂ. ಸಿದ್ದೇಶ್ವರ್, ಎ. ನಾರಾಯಣಸ್ವಾಮಿ, ಮಾಜಿ ಸಚಿವರಾದ ಬಿ. ಶ್ರೀರಾಮುಲು, ಮಾಜಿ ಶಾಸಕರಾದ ಜಿ.ಎಚ್. ತಿಪ್ಪಾರೆಡ್ಡಿ, ರಾಮಚಂದ್ರಪ್ಪ, ಎಂ.ಪಿ. ರೇಣುಕಾಚಾರ್ಯ, ತಿಪ್ಪೇಸ್ವಾಮಿ, ಶಾಸಕರಾದ ಎಂ. ಚಂದ್ರಪ್ಪ, ಜಿ.ಬಿ. ಜ್ಯೋತಿಗಣೇಶ್, ಬಿ. ಸುರೇಶ್ ಗೌಡ, ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್. ನವೀನ್, ಕೆ.ಎಂ. ಸುರೇಶ್, ಅನಿತ್ ಕುಮಾರ್ ಸೇರಿದಂತೆ ಪಕ್ಷದ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಉದ್ಯಾನವನಕ್ಕೆ ಮೀಸಲಿಟ್ಟ ಜಾಗ ಒತ್ತುವರಿ ಮಾಡಿದರೆ ಕಠಿಣ ಕ್ರಮ ಪಟ್ಟಣ ಪಂಚಾಯ್ತಿ ಮುಖ್ಯಾಧಿಕಾರಿ ಲೋಕ್ಯಾನಾಯ್ಕ ಎಚ್ಚರಿಕೆ

"ಮುಂಜಾನೆಯ ಮೆರಗು"

ಜಗಳೂರು ನ, 04– ಪಟ್ಟಣದ ಅಭಿವೃದ್ಧಿ ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ ಉದ್ಯಾನವನ ನಿರ್ಮಾಣಕ್ಕೆ ಮೀಸಲಿಟ್ಟಿರುವ ಜಾಗವನ್ನು ಯಾರಾದರೂ ಅತಿಕ್ರಮಣ ಮಾಡಲು ಮುಂದಾದರೆ ಅಂತಹವರ ವಿರುದ್ಧ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಿ. ಲೋಕ್ಯಾನಾಯ್ಕ ಎಚ್ಚರಿಕೆ ನೀಡಿದರು.


ಪಟ್ಟಣದ ವೈಭವ ಹೋಟೆಲ್ ಹಿಂಭಾಗದಲ್ಲಿ ಅಲೆಮಾರಿ, ಅರೆ ಅಲೆಮಾರಿ ಹಾಗೂ ಕೊಚ ಸಮುದಾಯದವರಿಗೆ ನೀಡಲಾಗಿರುವ ಪ್ರದೇಶದಲ್ಲಿ ಉದ್ಯಾನವನ ನಿರ್ಮಾಣಕ್ಕಾಗಿ ಪ್ರತ್ಯೇಕವಾಗಿ ಜಾಗ ಮೀಸಲಿಡಲಾಗಿದೆ. ಆದರೆ, ಉದ್ಯಾನವನಕ್ಕೆ ನಿಗದಿಪಡಿಸಿರುವ ಜಾಗದಲ್ಲಿ ವ್ಯಕ್ತಿಯೊಬ್ಬರು ಅತಿಕ್ರಮಣ ಮಾಡಲು ಮುಂದಾಗಿರುವುದು



ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಮೀಸಲಿಟ್ಟ ಜಾಗವನ್ನು ಯಾವುದೇ ಕಾರಣಕ್ಕೂ ವೈಯಕ್ತಿಕ ಉದ್ದೇಶಗಳಿಗೆ ಬಳಸಿಕೊಳ್ಳಬಾರದು ಎಂದು ಸೂಚಿಸಿದರು.

ಸಾರ್ವಜನಿಕರ ಅನುಕೂಲಕ್ಕಾಗಿ ಮೀಸಲಿಟ್ಟಿರುವ ಉದ್ಯಾನವನದ ಜಾಗವನ್ನು ಅದೇ ಉದ್ದೇಶಕ್ಕೆ ಬಳಕೆ ಮಾಡಿಕೊಳ್ಳಬೇಕು. ಪಟ್ಟಣದ ಜನರಿಗೆ ಉತ್ತಮ ಪರಿಸರ, ವಾಯುವಿಹಾರ ಹಾಗೂ ಮನರಂಜನೆಗೆ ಅನುಕೂಲವಾಗುವಂತೆ ಉದ್ಯಾನವನಗಳ ನಿರ್ಮಾಣ ಅಗತ್ಯವಿದೆ. ಇಂತಹ ಸಾರ್ವಜನಿಕ ಸ್ಥಳಗಳನ್ನು ಒತ್ತುವರಿ ಮಾಡುವುದು ಸರಿಯಲ್ಲ. ಆದ್ದರಿಂದ ಸಂಬಂಧಪಟ್ಟವರು ಸ್ವಯಂಪ್ರೇರಿತವಾಗಿ ಅತಿಕ್ರಮಣದಿಂದ ದೂರವಿರಬೇಕು ಎಂದು ತಿಳಿಸಿದರು.

ಇದೇ ವೇಳೆ ಪಟ್ಟಣದ ವಿವಿಧ



ಬಡಾವಣೆಗಳಲ್ಲಿ ಮನೆಗಳ ಸುತ್ತಮುತ್ತಲಿನ ಸಾರ್ವಜನಿಕ ಸ್ಥಳಗಳನ್ನು ಒತ್ತುವರಿ ಮಾಡಿಕೊಳ್ಳುತ್ತಿರುವ ಬಗ್ಗೆ ದೂರುಗಳು ಕೇಳಿಬರುತ್ತಿವೆ. ಸಾರ್ವಜನಿಕರು ನಿಯಮಾನುಸಾರ ತಮ್ಮ ಜಾಗವನ್ನು ಬಳಕೆ ಮಾಡಿಕೊಳ್ಳಬೇಕು. ಸಾರ್ವಜನಿಕ ರಸ್ತೆಗಳು, ಚರಂಡಿಗಳು ಹಾಗೂ ಇತರ ಸಾರ್ವಜನಿಕ ಸ್ಥಳಗಳಿಗೆ ತೊಂದರೆಯಾಗುವ ರೀತಿಯಲ್ಲಿ ಒತ್ತುವರಿ ಮಾಡಬಾರದು ಎಂದು ತಿಳಿಸಿದರು.

ಅಲ್ಲದೆ, ಚರಂಡ

ದೀಪಾವಳಿ ಸಂಭ್ರಮಕ್ಕೆ ಮಹಿಳಾ ಸ್ವಾವಲಂಬನೆಯ ಬೆಳಕು: 'ದೀಪ ಸಂಜೀವಿನಿ' ಮೇಳಕ್ಕೆ ಸಂಸದೆ ಪ್ರಭಾ ಮಲ್ಲಿಕಾರ್ಜುನ್ ಚಾಲನೆ

"ಮುಂಜಾನೆಯ ಮೆರಗು"

ದಾವಣಗೆರೆ ನ, 04– ದೀಪಾವಳಿ ಹಬ್ಬದ ಸಂಭ್ರಮಕ್ಕೆ ಗ್ರಾಮೀಣ ಮಹಿಳೆಯರ ಉದ್ಯಮಶೀಲತೆ ಹಾಗೂ ಸ್ವಾವಲಂಬನೆಯ ಮೆರುಗು ನೀಡುವ ಉದ್ದೇಶದಿಂದ ದಾವಣಗೆರೆಯಲ್ಲಿ ಆಯೋಜಿಸಿರುವ ವಿಶೇಷ 'ದೀಪ ಸಂಜೀವಿನಿ' ಮಾರಾಟ ಮೇಳಕ್ಕೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಚಾಲನೆ ನೀಡಿದರು.

ದಾವಣಗೆರೆ ಜಿಲ್ಲಾ ಪಂಚಾಯತ್, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಸಂಜೀವಿನಿ–ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನದ ಸಹಯೋಗದಲ್ಲಿ ನಗರದ ಎಸ್. ಎಸ್. ಗಾರ್ಡೇನಿಯಾ ಮಾಲ್ ಬಳಿ ಆಯೋಜಿಸಿದ್ದ ಮೇಳವನ್ನು ಉದ್ಘಾಟಿಸಿ, ಮಹಿಳಾ ಸ್ವಸಹಾಯ ಸಂಘಗಳ ಉತ್ಪನ್ನಗಳನ್ನು ವೀಕ್ಷಿಸಿದರು.

ಗ್ರಾಮೀಣ ಸ್ವಸಹಾಯ ಸಂಘಗಳ ಮಹಿಳೆಯರು ತಮ್ಮ ಕೌಶಲ್ಯ, ಸೃಜನಶೀಲತೆ ಹಾಗೂ ಪರಿಶ್ರಮದಿಂದ



ತಯಾರಿಸಿದ ಮಣ್ಣಿನ ದೀಪಗಳು, ಅಲಂಕಾರಿಕ ವಸ್ತುಗಳು ಸೇರಿದಂತೆ ವಿವಿಧ ಉತ್ಪನ್ನಗಳನ್ನು ವೀಕ್ಷಿಸಿದ ಸಂಸದರು, ಮಹಿಳೆಯರ ಉದ್ಯಮಶೀಲ ಪ್ರಯತ್ನಗಳಿಗೆ ಮೆಚ್ಚುಗೆ ವ್ಯಕ್ತಪಡಿಸಿ ಪ್ರೋತ್ಸಾಹಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗ್ರಾಮೀಣ ಮಹಿಳೆಯರ ಪ್ರತಿಭೆ ಮತ್ತು ಪರಿಶ್ರಮಕ್ಕೆ ಸೂಕ್ತ ಮಾರುಕಟ್ಟೆ ಕಲ್ಪಿಸುವುದರ ಜೊತೆಗೆ ಅವರ ಉತ್ಪನ್ನಗಳಿಗೆ ಹೆಚ್ಚಿನ ವ್ಯಾಪಾರಾವಕಾಶ ಒದಗಿಸುವಲ್ಲಿ ಇಂತಹ ಮೇಳಗಳು ಮಹತ್ವದ ಪಾತ್ರ ವಹಿಸುತ್ತವೆ. ಇದರಿಂದ ಮಹಿಳೆಯರ ಆದಾಯ ಹೆಚ್ಚಳ ಹಾಗೂ ಆರ್ಥಿಕ ಸಬಲೀಕರಣಕ್ಕೆ ಉತ್ತೇಜನ ದೊರೆಯಲಿದೆ ಎಂದರು.

ಮಹಿಳೆಯರ ಆರ್ಥಿಕ ಸ್ವಾವಲಂಬನೆಯೇ ಸದೃಢ ಕುಟುಂಬ ಮತ್ತು ಸಮೃದ್ಧ ಸಮಾಜದ ಅಡಿಪಾಯವಾಗಿದೆ. ಗ್ರಾಮೀಣ ಮಹಿಳೆಯರ ಉದ್ಯಮಶೀಲ ಕನಸುಗಳಿಗೆ ಹೆಚ್ಚಿನ ಅವಕಾಶಗಳು ದೊರೆತು ಅವರು ಯಶಸ್ವಿ ಉದ್ಯಮಿಗಳಾಗಿ ಬೆಳೆಯಬೇಕು. ಈ ನಿಟ್ಟಿನಲ್ಲಿ ಸಾರ್ವಜನಿಕರು ಮಹಿಳೆಯರು ತಯಾರಿಸಿದ ಸ್ಥಳೀಯ ಉತ್ಪನ್ನಗಳನ್ನು ಖರೀದಿಸುವ ಮೂಲಕ ಅವರ ಪರಿಶ್ರಮಕ್ಕೆ ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.

ನಗರದ ಡೆಂಟಲ್ ಕಾಲೇಜು ರಸ್ತೆಯಲ್ಲಿರುವ ಬಿ.ಎಸ್.ಸಿ. ಎಕ್ಸ್‌ಕ್ಲೂಸಿವ್ ಮುಂಭಾಗ ಹಾಗೂ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಮುಂಭಾಗದಲ್ಲಿಯೂ ದೀಪ ಸಂಜೀವಿನಿ ಮಾರಾಟ ಮೇಳ ಆಯೋಜಿಸಲಾಗಿದೆ. ಅಲ್ಲದೆ, ಜಿಲ್ಲಾ ಪಂಚಾಯತ್ ಕಚೇರಿಯ ಮಾರಾಟ ಮಳಿಗೆಯಲ್ಲಿಯೂ ಸ್ವಸಹಾಯ ಸಂಘಗಳ ಮಹಿಳೆಯರು ತಯಾರಿಸಿದ ವಿವಿಧ ಉತ್ಪನ್ನಗಳು ಲಭ್ಯವಿವೆ ಎಂದು ತಿಳಿಸಿದರು.

ದೀಪಾವಳಿ ಹಬ್ಬದ ಸಂದರ್ಭದಲ್ಲಿ ಸ್ಥಳೀಯ ಉತ್ಪನ್ನಗಳನ್ನು ಖರೀದಿಸುವ ಮೂಲಕ ಗ್ರಾಮೀಣ ಮಹಿಳೆಯರ ಆರ್ಥಿಕ ಸ್ವಾವಲಂಬನೆಗೆ ಸಾರ್ವಜನಿಕರು ಕೈಜೋಡಿಸಬೇಕು ಎಂಬ ಆಶಯ ವ್ಯಕ್ತಪಡಿಸಿದರು.

ಕೂಡ್ಲಿಗಿ ಪಟ್ಟಣದ ಕುಡಿಯುವ ನೀರು, ಒಳಚರಂಡಿ ಸಮಸ್ಯೆ ಪರಿಹಾರಕ್ಕೆ ಶಾಸಕರ ಸೂಚನೆ

"ಮುಂಜಾನೆಯ ಮೆರಗು"

ಕೂಡ್ಲಿಗಿ ನ, 04– ಪಟ್ಟಣದ ಜನರಿಗೆ ಸಮರ್ಪಕ ಕುಡಿಯುವ ನೀರು ಪೂರೈಕೆ ಹಾಗೂ ಒಳಚರಂಡಿ ವ್ಯವಸ್ಥೆಯಲ್ಲಿನ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಶಾಸಕ ಡಾ. ಶ್ರೀನಿವಾಸ್ ಎನ್.ಟಿ. ಅವರು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.



ಪಟ್ಟಣದ ಶಾಸಕರ ಸಾರ್ವಜನಿಕ ಸಂಪರ್ಕ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಕುಡಿಯುವ ನೀರು ಪೂರೈಕೆಯಲ್ಲಿನ ಸಮಸ್ಯೆಗಳು ಹಾಗೂ ಒಳಚರಂಡಿ ವ್ಯವಸ್ಥೆಯ ಅವ್ಯವಸ್ಥೆಯಿಂದ ಸಾರ್ವಜನಿಕರು ಎದುರಿಸುತ್ತಿರುವ ತೊಂದರೆಗಳ ಕುರಿತು ಸಮಗ್ರವಾಗಿ ಚರ್ಚಿಸಲಾಯಿತು.

ಪಟ್ಟಣದ ಪ್ರತಿಯೊಂದು ಪ್ರದೇಶಕ್ಕೂ ನಿರಂತರವಾಗಿ ಶುದ್ಧ ಕುಡಿಯುವ ನೀರು ಪೂರೈಕೆಯಾಗಬೇಕು. ಒಳಚರಂಡಿ ವ್ಯವಸ್ಥೆ ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ಅಗತ್ಯ ಕ್ರಮ ಕೈಗೊಳ್ಳಬೇಕು. ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಸಮಸ್ಯೆಗಳನ್ನು ಆದ್ಯತೆಯ ಮೇರೆಗೆ ಪರಿಹರಿಸಿ, ಶಾಶ್ವತ ಪರಿಹಾರ ಕಲ್ಪಿಸಲು ಅಧಿಕಾರಿಗಳು ತ್ವರಿತವಾಗಿ ಕಾರ್ಯಪ್ರವೃತ್ತರಾಗಬೇಕು ಎಂದು ಶಾಸಕರು ಸೂಚಿಸಿದರು.

ಮೂಲಭೂತ ಸೌಕರ್ಯಗಳ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ವಹಿಸದೆ, ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಿ ಅಗತ್ಯ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ಮಂಡಳಿಯ ಮುಖ್ಯ ಅಭಿಯಂತರರಾದ ಮಂಜುನಾಥ್, ಪ್ರಕಾಶ್ ಮತ್ತು ಪ್ರಿಯಾ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

ರೈತರ ಬೆಳೆಗಳ ರಕ್ಷಣೆ ಹಾಗೂ ಕುಡಿಯುವ ನೀರಿನ ಸಂಗ್ರಹಕ್ಕೆ ಹೆಚ್ಚುವರಿ 10 ದಿನ ನೀರು ಪೂರೈಸುವಂತೆ ಆಗ್ರಹ: ಬಿ. ನಾಗೇಂದ್ರ

"ಮುಂಜಾನೆಯ ಮೆರಗು"

ಬಳ್ಳಾರಿ ನ, 04– ತುಂಗಭದ್ರಾ ಜಲಾಶಯವನ್ನು ಅವಲಂಬಿಸಿರುವ ಕಾಲುವೆಗಳ ವ್ಯಾಪ್ತಿಯ ರೈತರ ಬೆಳೆಗಳಿಗೆ ಹಾಗೂ ಸಾರ್ವಜನಿಕರ ಕುಡಿಯುವ ನೀರಿನ ಅಗತ್ಯಕ್ಕೆ ಯಾವುದೇ ತೊಂದರೆಯಾಗದಂತೆ ನವೆಂಬರ್ 30ರವರೆಗೆ ಸಮರ್ಪಕವಾಗಿ ನೀರು ಹರಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಲಾಗಿದೆ ಎಂದು ಮಾಜಿ ಸಚಿವ ಹಾಗೂ ಶಾಸಕ ಬಿ. ನಾಗೇಂದ್ರ ತಿಳಿಸಿದರು.

ಬಳ್ಳಾರಿ, ರಾಯಚೂರು ಹಾಗೂ ಕೊಪ್ಪಳ ಜಿಲ್ಲೆಗಳ ಜನಪ್ರತಿನಿಧಿಗಳ ನೇತೃತ್ವದಲ್ಲಿ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಈ ಕುರಿತು ಮನವಿ ಸಲ್ಲಿಸಲಾಗಿದೆ.

ಅಕ್ಟೋಬರ್ 19ರಂದು ನಡೆದ ತುಂಗಭದ್ರಾ ಜಲಾಶಯದ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ನವೆಂಬರ್ 20ರವರೆಗೆ ನೀರು ಹರಿಸಲು ತೀರ್ಮಾನಿಸಲಾಗಿತ್ತು. ಆದರೆ, ಮಳೆಯ ಅಭಾವದಿಂದಾಗಿ ಕಟಾವಿನ ಹಂತದಲ್ಲಿರುವ ಬೆಳೆಗಳಿಗೆ ನೀರಿನ ಅವಶ್ಯಕತೆ ಹೆಚ್ಚಾಗಿದೆ. ಹೀಗಾಗಿ ರೈತರ ಹಿತದೃಷ್ಟಿಯಿಂದ ಹೆಚ್ಚುವರಿಯಾಗಿ 10 ದಿನಗಳ ಕಾಲ ನೀರು ಪೂರೈಸುವಂತೆ ಮನವಿ ಮಾಡಲಾಗಿದೆ.

ಭತ್ತ, ಜೋಳ ಹಾಗೂ ಮೆಣಸಿನಕಾಯಿ ಬೆಳೆಗಳಿಗೆ ಅಗತ್ಯ ಪ್ರಮಾಣದ ನೀರು ದೊರೆತರೆ ರೈತರು ಉತ್ತಮ ಇಳುವರಿ ಪಡೆಯಲು ಸಾಧ್ಯವಾಗಲಿದೆ. ಇದರಿಂದ ರೈತರ ಆರ್ಥಿಕ ಸ್ಥಿತಿಗೂ ಅನುಕೂಲವಾಗಲಿದೆ. ಅಲ್ಲದೆ, ಬೇಸಿಗೆ ಅವಧಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಕೆರೆಗಳಿಗೆ ನೀರು ಸಂಗ್ರಹಿಸಿಡಲು ಸಹಕಾರಿಯಾಗಲಿದೆ. ಆದ್ದರಿಂದ ನವೆಂಬರ್ 30ರವರೆಗೆ ನೀರು ಹರಿಸುವ ನಿರ್ಧಾರ ಕೈಗೊಳ್ಳುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗಿದೆ ಎಂದು ಹೇಳಿದರು.



ಈ ಸಂದರ್ಭದಲ್ಲಿ ತುಂಗಭದ್ರಾ ಜಲಾಶಯದ ನೀರಾವರಿ ಸಲಹಾ ಸಮಿತಿ ಅಧ್ಯಕ್ಷರು ಹಾಗೂ ಸಚಿವ ಶಿವರಾಜ್ ತಂಗಡಗಿ, ವಸತಿ ಸಚಿವ ಬಿ.ಜೆಡ್. ಜಮೀರ್ ಅಹಮದ್ ಖಾನ್, ಶಾಸಕರಾದ ಎಚ್.ಆರ್. ಗವಿಯಪ್ಪ, ಹಂಪನಗೌಡ ಬಾದರ್ಲಿ, ಬಿ.ಎಂ. ನಾಗರಾಜ್, ಬಸನಗೌಡ ತುರ್ವಿಹಾಳ್, ಬಸವನಗೌಡ ಬಾದರ್ಲಿ, ತುಂಗಭದ್ರಾ ರೈತ ಸಂಘದ ಅಧ್ಯಕ್ಷ ದರೂರು ಪುರುಷೋತ್ತಮ್ ಗೌಡ ಸೇರಿದಂತೆ ಹಲವು ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

ಜಾಗತಿಕ ಕೌಶಲ್ಯಗಳ ರಾಜಧಾನಿಯಾಗಿ ಕರ್ನಾಟಕ ರೂಪುಗೊಳ್ಳುತ್ತಿದೆ: ಪ್ರಿಯಾಂಕ್ ಖರ್ಗೆ

"ಮುಂಜಾನೆಯ ಮೆರಗು"

ಬೆಂಗಳೂರು ನ, 04– ಗುಣಮಟ್ಟದ ಶಿಕ್ಷಣ, ಕೌಶಲ್ಯಾಭಿವೃದ್ಧಿ ಹಾಗೂ ನಿರಂತರ ಕಲಿಕೆಯ ಮೂಲಕ ಕರ್ನಾಟಕವನ್ನು ಜಾಗತಿಕ ಜ್ಞಾನ ಮತ್ತು ಕೌಶಲ್ಯಗಳ ರಾಜಧಾನಿಯಾಗಿ ರೂಪಿಸಲಾಗುತ್ತಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.



ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ವತಿಯಿಂದ ಆಯೋಜಿಸಿದ್ದ 'ಬೆಂಗಳೂರು ಸ್ಕಿಲ್ ಸಮಿಟ್ 2026'ರ ಎರಡನೇ ಆವೃತ್ತಿಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಕರ್ನಾಟಕದ ಅತ್ಯಂತ ದೊಡ್ಡ ಸ್ಪರ್ಧಾತ್ಮಕ ಶಕ್ತಿ ಇಲ್ಲಿನ ಪ್ರತಿಭಾವಂತ ಮಾನವ ಸಂಪನ್ಮೂಲವಾಗಿದೆ. ತಳಮಟ್ಟದಲ್ಲಿಯೇ ಗುಣಮಟ್ಟದ ಶಿಕ್ಷಣ ಹಾಗೂ ಪರಿಣಾಮಕಾರಿ ಕೌಶಲ್ಯಾಭಿವೃದ್ಧಿಗೆ ಆದ್ಯತೆ ನೀಡಿದಾಗ ಮಾತ್ರ ಸಮರ್ಥ ಪ್ರತಿಭಾವಂತರ ಸರಣಿ ನಿರ್ಮಾಣ ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ತಂತ್ರಜ್ಞಾನ ಕ್ಷೇತ್ರದಲ್ಲಿ ತ್ವರಿತ ಬದಲಾವಣೆಗಳು ನಡೆಯುತ್ತಿರುವ ಹಿನ್ನೆಲೆಯಲ್ಲಿ ಉದ್ಯೋಗಿಗಳು ನಿರಂತರವಾಗಿ ಹೊಸ ವಿಷಯಗಳನ್ನು ಕಲಿಯುವುದು, ಹಳೆಯ ಕೌಶಲ್ಯಗಳನ್ನು ಬದಲಾಯಿಸಿಕೊಂಡು ಹೊಸ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳುವುದು ಅನಿವಾರ್ಯವಾಗಿದೆ. ಭವಿಷ್ಯದ ಉದ್ಯೋಗ ಮಾರುಕಟ್ಟೆಯ ಅಗತ್ಯಗಳಿಗೆ ತಕ್ಕಂತೆ ಯುವಜನರನ್ನು ಸಜ್ಜುಗೊಳಿಸುವುದು ಸರ್ಕಾರದ ಪ್ರಮುಖ ಆದ್ಯತೆಯಾಗಿದೆ ಎಂದರು.

ಬೆಂಗಳೂರು ಹೊರವಲಯ ಹಾಗೂ ರಾಜ್ಯದ ಇತರ ನಗರಗಳಿಗೂ ಕೌಶಲ್ಯಾಭಿವೃದ್ಧಿ ಅವಕಾಶಗಳನ್ನು ವಿಸ್ತರಿಸುವ ಉದ್ದೇಶದಿಂದ 'ಬಿಯಾಂಡ್ ಬೆಂಗಳೂರು' ಪರಿಕಲ್ಪನೆಗೆ ಒತ್ತು ನೀಡಲಾಗುತ್ತಿದೆ. ಉದ್ಯಮ ಕ್ಷೇತ್ರ ಮತ್ತು ಶೈಕ್ಷಣಿಕ ಸಂಸ್ಥೆಗಳ ನಡುವಿನ ಅಂತರ ಕಡಿಮೆ ಮಾಡಿ, ನೈಜ ಉದ್ಯೋಗ ಮಾರುಕಟ್ಟೆಯ ಬೇಡಿಕೆಗಳಿಗೆ ಅನುಗುಣವಾಗಿ ಕೌಶಲ್ಯ ತರಬೇತಿ ರೂಪಿಸಲಾಗುತ್ತಿದೆ ಎಂದು ತಿಳಿಸಿದರು.

'ನಿಪುಣ ಕರ್ನಾಟಕ' ಸೇರಿದಂತೆ ಸರ್ಕಾರದ ವಿವಿಧ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳ ಮೂಲಕ ಯುವಜನರಿಗೆ ಹೊಸ ಅವಕಾಶಗಳನ್ನು ಕಲ್ಪಿಸಲಾಗುತ್ತಿದೆ. ಜಾಗತಿಕ ಮಟ್ಟದ ಪ್ರತಿಭೆಗಳೊಂದಿಗೆ ಸ್ಪರ್ಧಿಸಬಲ್ಲ, ಭವಿಷ್ಯದ ಸವಾಲುಗಳಿಗೆ ಸಿದ್ಧವಾಗಿರುವ ಹಾಗೂ ಬದಲಾವಣೆಗಳಿಗೆ ತ್ವರಿತವಾಗಿ ಹೊಂದಿಕೊಳ್ಳುವ ಕಾರ್ಯಪಡೆಯನ್ನು ಕರ್ನಾಟಕ ಹೊಂದಿದೆ ಎಂದು ಸಚಿವರು ವಿಶ್ವಾಸ ವ್ಯಕ್ತಪಡಿಸಿದರು.

ಚಿಂತಾಮಣಿಯಲ್ಲಿ 850 ಎಕರೆ ಪ್ರದೇಶದಲ್ಲಿ ನೂತನ ಟೌನ್‌ಶಿಪ್ ನಿರ್ಮಾಣಕ್ಕೆ ಸಿದ್ಧತೆ: ಡಾ. ಯತೀಂದ್ರ ಸಿದ್ದರಾಮಯ್ಯ

"ಮುಂಜಾನೆಯ ಮೆರಗು"

ಚಿಂತಾಮಣಿ ನ, 04– ಚಿಂತಾಮಣಿ ನಗರದ ಸಮಗ್ರ ಹಾಗೂ ಸುಸ್ಥಿರ ಅಭಿವೃದ್ಧಿಗೆ ಒತ್ತು ನೀಡುವ ನಿಟ್ಟಿನಲ್ಲಿ ಚಿಂತಾಮಣಿ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಸುಮಾರು 850 ಎಕರೆ ಪ್ರದೇಶದಲ್ಲಿ ನೂತನ ಟೌನ್‌ಶಿಪ್ ನಿರ್ಮಿಸುವ ಮಹತ್ವದ ಯೋಜನೆ ರೂಪಿಸಲಾಗಿದೆ ಎಂದು ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ತಿಳಿಸಿದರು.

ಈ ಸಂಬಂಧ ಗೃಹ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಯೋಜನೆಯ ಪ್ರಗತಿ ಹಾಗೂ ಮುಂದಿನ ಕಾರ್ಯಯೋಜನೆ ಕುರಿತು ಚರ್ಚಿಸಿದರು.

ಟೌನ್‌ಶಿಪ್ ನಿರ್ಮಾಣಕ್ಕೆ ಅಗತ್ಯವಿರುವ ಭೂಮಿಯ ಸರ್ವೇ ಕಾರ್ಯ ಈಗಾಗಲೇ ಪೂರ್ಣಗೊಂಡಿದ್ದು, ಯೋಜನೆಗೆ ಅಂತಿಮ ರೂಪ ನೀಡಲಾಗಿದೆ. ಈ



ಯೋಜನೆ ಅನುಷ್ಠಾನಗೊಂಡಲ್ಲಿ ಚಿಂತಾಮಣಿ ನಗರದ ಅಭಿವೃದ್ಧಿಗೆ ಹೊಸ ವೇಗ ದೊರೆಯಲಿದೆ. ಸುಸಜ್ಜಿತ ವಸತಿ ಪ್ರದೇಶಗಳ ಜೊತೆಗೆ ಅಗತ್ಯ ಮೂಲಸೌಕರ್ಯ, ನಾಗರಿಕ ಸೌಲಭ್ಯಗಳು ಹಾಗೂ ಯೋಜಿತ ನಗರ ವ್ಯವಸ್ಥೆ ಒಂದೇ ಪ್ರದೇಶದಲ್ಲಿ ರೂಪುಗೊಳ್ಳಲಿದೆ ಎಂದು ಹೇಳಿದರು.

ಯೋಜನೆಗೆ ಅಗತ್ಯವಿರುವ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆಗೆ ಸಂಬಂಧಿಸಿದಂತೆ ಕಂದಾಯ ಇಲಾಖೆಯ ಸಹಕಾರ ಪಡೆದು, ನಿಯಮಾನುಸಾರ ಮುಂದಿನ ಕ್ರಮಗಳನ್ನು ತ್ವರಿತವಾಗಿ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಚಿಂತಾಮಣಿಯನ್ನು ಭವಿಷ್ಯದ ಅಗತ್ಯಗಳಿಗೆ ಅನುಗುಣವಾಗಿ ಯೋಜಿತ ನಗರವನ್ನಾಗಿ ಅಭಿವೃದ್ಧಿಪಡಿಸುವುದು, ಸುಧಾರಿತ ಮೂಲಸೌಕರ್ಯ ಕಲ್ಪಿಸುವುದು ಹಾಗೂ ಸಾರ್ವಜನಿಕರಿಗೆ ಗುಣಮಟ್ಟದ ನಾಗರಿಕ ಸೌಲಭ್ಯಗಳನ್ನು ಒದಗಿಸುವುದು ಸರ್ಕಾರದ ಆದ್ಯತೆಯಾಗಿದೆ. ಈ ನಿಟ್ಟಿನಲ್ಲಿ ಯೋಜನೆಯ ಅನುಷ್ಠಾನಕ್ಕೆ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಚಿಂತಾಮಣಿ ಶಾಸಕ ಡಾ. ಎಂ.ಸಿ. ಸುಧಾಕರ್, ಚಿಂತಾಮಣಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶ್ರೀನಾಥ್ (ಬಾಬು ರೆಡ್ಡಿ), ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ಬಿ.ಬಿ. ಕಾವೇರಿ, ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತ ಶಿವಾನಂದ ಕಪಾಶಿ, ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪ್ರಭು ಜಿ., ಆಯುಕ್ತಾಲಯದ ನಿರ್ದೇಶಕ ತಿಪ್ಪೇಸ್ವಾಮಿ ಎನ್.ಕೆ. ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಸಂವಿಧಾನದ ಆಶಯ ಮತ್ತು ಜನರ ಹಕ್ಕುಗಳ ರಕ್ಷಣೆಗೆ ಬಿಜೆಪಿ ಸಂಕಲ್ಪ: ಬಸವರಾಜ ಬೊಮ್ಮಾಯಿ

"ಮುಂಜಾನೆಯ ಮೆರಗು"

ಹಾವೇರಿ ನ, 04– ಪ್ರಜಾಪ್ರಭುತ್ವದ ಮೌಲ್ಯಗಳು, ಸಂವಿಧಾನದ ಆಶಯಗಳು ಹಾಗೂ ಜನರ ಹಕ್ಕುಗಳ ರಕ್ಷಣೆಯ ಉದ್ದೇಶದಿಂದ ಭಾರತೀಯ ಜನತಾ ಪಾರ್ಟಿಯ ಧಾರವಾಡ ವಿಭಾಗದ ವತಿಯಿಂದ ಹಾವೇರಿಯಲ್ಲಿ 'ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ' ಎಂಬ ಘೋಷವಾಕ್ಯದಡಿ ಪಾದಯಾತ್ರೆ ಆಯೋಜಿಸಲಾಗಿತ್ತು.



ಪಾದಯಾತ್ರೆಯಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಪಾಲ್ಗೊಂಡು ಪಕ್ಷದ ಕಾರ್ಯಕರ್ತರು ಮತ್ತು ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದರು.

ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯುವುದು, ಸಂವಿಧಾನದ ಆಶಯಗಳನ್ನು ರಕ್ಷಿಸುವುದು ಹಾಗೂ ಜನರ ಹಕ್ಕುಗಳ ಸಂರಕ್ಷಣೆಗೆ ಬದ್ಧರಾಗಿರುವ ಉದ್ದೇಶದಿಂದ ಈ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಪಾದಯಾತ್ರೆಯಲ್ಲಿ ಪಕ್ಷದ ಕಾರ್ಯಕರ್ತರು, ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಅಭಿಯಾನಕ್ಕೆ ಬೆಂಬಲ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಹಾವೇರಿ ಜಿಲ್ಲಾಧ್ಯಕ್ಷ ವೀರುಪಾಕ್ಷಪ್ಪ ಬಳ್ಳಾರಿ, ಮಾಜಿ ಸಚಿವರಾದ ಸಿ.ಸಿ.ಪಾಟೀಲ್, ಬಿ.ಸಿ.ಪಾಟೀಲ್, ಶಾಸಕರಾದ ಅರವಿಂದ ಬೆಲ್ಲದ, ಮಹೇಶ್ ಟೆಂಗಿನಕಾಯಿ, ಡಾ.ಚಂದ್ರು ಲಮಾಣಿ, ಮಾಜಿ ಶಾಸಕರಾದ ಶಿವರಾಜ ಸಜ್ಜನ, ಅರುಣಕುಮಾರ ಪೂಜಾರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಲಿಂಗರಾಜ ಪಾಟೀಲ್, ಮಾಜಿ ವಿಧಾನ ಪರಿಷತ್ ಸದಸ್ಯ ನಾಗರಾಜ ಛಬ್ಬಿ, ಧಾರವಾಡ ಜಿಲ್ಲಾ ಬಿಜೆಪಿ ಅಧ್ಯಕ್ಷ ತಿಪ್ಪಣ್ಣ ಮಜ್ಜಗಿ, ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ, ಭರತ ಬೊಮ್ಮಾಯಿ, ಗವಿಸಿದ್ದಪ್ಪ ದ್ಯಾಮಣ್ಣವರ, ಜಯತೀರ್ಥ ಕಟ್ಟಿ, ಭೋಜರಾಜ ಕರೂದಿ, ಸೇರಿದಂತೆ ಹಲವು ಮುಖಂಡರು ಹಾಗೂ ಕಾರ್

1,000 ಸರ್ಕಾರಿ ಶಾಲೆಗಳನ್ನು ಖಾಸಗಿ ಶಾಲೆಗಳೊಂದಿಗೆ ಜೋಡಿಸುವ ಗುರಿ: ಡಿ.ಕೆ.ಶಿವಕುಮಾರ್

ಗ್ರಾಮೀಣ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ಒದಗಿಸಲು ಸಿಎಸ್‌ಆರ್ ನಿಧಿ ಬಳಕೆಗೆ ಒತ್ತು

"ಮುಂಜಾನೆಯ ಮೆರಗು"

ಬೆಂಗಳೂರು ನ, 04– ಗ್ರಾಮೀಣ ಪ್ರದೇಶದ ಸರ್ಕಾರಿ ಶಾಲೆಗಳ ಗುಣಮಟ್ಟ ಸುಧಾರಿಸಿ, ಖಾಸಗಿ ಶಾಲೆಗಳಿಗೆ ಸಮಾನವಾದ ಶಿಕ್ಷಣ ಸೌಲಭ್ಯಗಳನ್ನು ಕಲ್ಪಿಸುವ ಉದ್ದೇಶದಿಂದ ಆರಂಭದಲ್ಲಿ 1,000 ಸರ್ಕಾರಿ ಶಾಲೆಗಳನ್ನು ಖಾಸಗಿ ಶಾಲೆಗಳೊಂದಿಗೆ ಜೋಡಿಸುವ ಗುರಿ ಹೊಂದಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.



ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ (ಸಿಎಸ್‌ಆರ್) ಪ್ರತಿನಿಧಿಗಳ ಸಭೆಯಲ್ಲಿ 'ನಮ್ಮ ಶಾಲೆ ನಮ್ಮ ಜವಾಬ್ದಾರಿ' ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರಾಜ್ಯ ಸರ್ಕಾರ ಹೊಸ ಸಿಎಸ್‌ಆರ್ ನೀತಿ ಜಾರಿಗೆ ತಂದಿದ್ದು, ಖಾಸಗಿ ಶಾಲೆಗಳ ಆಡಳಿತ ಮಂಡಳಿಗಳು ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳನ್ನು ದತ್ತು ಪಡೆದು ಅವುಗಳ ಅಭಿವೃದ್ಧಿಗೆ ಕೈಜೋಡಿಸಬೇಕು. ಸರ್ಕಾರಿ ಶಾಲೆಗಳ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ, ಉತ್ತಮ ಮೂಲಸೌಕರ್ಯ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ. ಮುಂದಿನ ದಿನಗಳಲ್ಲಿ 2,000 ಸರ್ಕಾರಿ ಶಾಲೆಗಳನ್ನು ಖಾಸಗಿ ಶಾಲೆಗಳೊಂದಿಗೆ ಜೋಡಿಸುವ ಚಿಂತನೆಯೂ ಇದೆ ಎಂದು ಹೇಳಿದರು.

ರಾಜ್ಯದ 6,000 ಪಂಚಾಯಿತಿಗಳನ್ನು ಮೂರು ವಿಭಾಗಗಳಾಗಿ ವಿಂಗಡಿಸಿದ್ದು, ಮೊದಲ ಹಂತದಲ್ಲಿ 1,000 ಶಾಲೆಗಳ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ. ಖಾಸಗಿ ಶಾಲೆಗಳ ಆಡಳಿತ ಮಂಡಳಿಗಳು ತಮ್ಮ ಆರ್ಥಿಕ ಸಾಮರ್ಥ್ಯ ಮತ್ತು ಅನುಕೂಲಕ್ಕೆ ತಕ್ಕಂತೆ ಶಾಲೆಗಳನ್ನು ಆಯ್ಕೆ ಮಾಡಿಕೊಳ್ಳಬಹುದು. ಒಂದು ಖಾಸಗಿ ಶಾಲೆಯು ಮೂರು ಸರ್ಕಾರಿ ಶಾಲೆಗಳನ್ನು ದತ್ತು ಪಡೆಯಲು ಅವಕಾಶವಿದೆ. ಮುಂದಿನ ನಾಲ್ಕೈದು ವರ್ಷಗಳಲ್ಲಿ ಈ ಪ್ರಯತ್ನದ ಉತ್ತಮ ಫಲಿತಾಂಶ ನಿರೀಕ್ಷಿಸಲಾಗಿದೆ ಎಂದರು.

ರಾಜ್ಯದಲ್ಲಿ ವಾರ್ಷಿಕ ಸುಮಾರು 8,800 ಕೋಟಿ ರೂ.ಗಳ ಸಿಎಸ್‌ಆರ್ ನಿಧಿ ಲಭ್ಯವಿದೆ. ಕಂಪನಿಗಳ ಆಡಳಿತ ಮಂಡಳಿಗಳೊಂದಿಗೆ ಚರ್ಚಿಸಿ, ಈ ನಿಧಿಯನ್ನು ಗ್ರಾಮೀಣ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಬಳಸುವಂತೆ ಮನವಿ ಮಾಡಲಾಗಿದೆ. ಈ ನಿಟ್ಟಿನಲ್ಲಿ ಕಂಪನಿಗಳು ಈಗಾಗಲೇ ಕಾರ್ಯಾರಂಭ ಮಾಡಿದ್ದು, ಖಾಸಗಿ ಶಾಲೆಗಳ ಆಡಳಿತ ಮಂಡಳಿಗಳೂ ಸಹಭಾಗಿತ್ವ ವಹಿಸಬೇಕು ಎಂದು ಕರೆ ನೀಡಿದರು.

ಸಿಎಸ್‌ಆರ್ ನಿಧಿ ಬಳಕೆಯಲ್ಲಿನ ಅಕ್ರಮಗಳಿಗೆ ಕಡಿವಾಣ ಹಾಕುವ ಅಗತ್ಯವಿದೆ. ಈ ಕುರಿತು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಿ ಚರ್ಚಿಸಿದ್ದು, ರಾಜ್ಯದಲ್ಲಿ ಸಂಗ್ರಹವಾಗುವ ನಿಧಿಯನ್ನು ರಾಜ್ಯದ ಅಭಿವೃದ್ಧಿ ಕಾರ್ಯಗಳಿಗೆ ಬಳಸುವಂತೆ ಮನವಿ ಮಾಡಿರುವುದಾಗಿ ತಿಳಿಸಿದರು.

ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ಈಗಾಗಲೇ 30 ಸರ್ಕಾರಿ ಶಾಲೆಗಳಲ್ಲಿ ಕಂಪನಿಗಳ ಸಿಎಸ್‌ಆರ್ ನಿಧಿಯಡಿ ಅಭಿವೃದ್ಧಿ ಕಾರ್ಯಗಳು ಆರಂಭವಾಗಿವೆ. ಕೆಲವು ಶಾಲೆಗಳ ಕಾಮಗಾರಿ ಪೂರ್ಣಗೊಂಡಿದ್ದು, ಎಂಟು ಶಾಲೆಗಳಲ್ಲಿ ಕಾಮಗಾರಿ ಪ್ರಗತಿಯಲ್ಲಿದೆ. ಉಳಿದ 12 ಶಾಲೆಗಳೊಂದಿಗೆ ಒಪ್ಪಂದ ಪ್ರಕ್ರಿಯೆ ಪೂರ್ಣಗೊಂಡಿದೆ. ಟೊಯೋಟಾ ಕಂಪನಿಯು ರಾಮನಗರ ಜಿಲ್ಲೆಯಲ್ಲಿ 23 ಶಾಲೆಗಳ ಅಭಿವೃದ್ಧಿಗೆ ನೆರವು ನೀಡುತ್ತಿದ್ದು, ಪ್ರತಿ ಶಾಲೆಗೆ 10ರಿಂದ 15 ಕೋಟಿ ರೂ. ಹೂಡಿಕೆ ಮಾಡುತ್ತಿದೆ ಎಂದು ಮಾಹಿತಿ ನೀಡಿದರು.

ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಪಡಿಸುವ ಖಾಸಗಿ ಸಂಸ್ಥೆಗಳಿಗೆ ತಮ್ಮ ಶಾಲೆಯ ಹೆಸರನ್ನು ಸರ್ಕಾರಿ ಶಾಲೆಯ ಹೆಸರಿನೊಂದಿಗೆ ಸೇರಿಸಲು ಅವಕಾಶ ಕಲ್ಪಿಸಲಾಗಿದೆ. ತಮಿಳುನಾಡು ಗಡಿಯ ಹೆಗ್ಗನೂರು ಸರ್ಕಾರಿ ಶಾಲೆಗೆ 'ಹೆಗ್ಗನೂರು ಸರ್ಕಾರಿ ಟೊಯೋಟಾ ಶಾಲೆ' ಎಂದು ಹೆಸರಿಡಲು ಅವಕಾಶ ನೀಡಲಾಗಿದೆ ಎಂದು ವಿವರಿಸಿದರು.



ಇದಲ್ಲದೆ, ವಿಶ್ವಬ್ಯಾಂಕ್‌ನಿಂದ 2,000 ಕೋಟಿ ರೂ. ಸಾಲ ಪಡೆದು ಕೆಪಿಎಸ್ ಶಾಲೆಗಳ ಮೂಲಸೌಕರ್ಯ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗಿದೆ. ಸರ್ಕಾರಿ ಶಾಲೆಗಳ ಶಿಕ್ಷಣದ ಗುಣಮಟ್ಟ ಹೆಚ್ಚಿಸಲು ಶಿಕ್ಷಕರ ಆಯ್ಕೆಯಲ್ಲಿಯೂ ಗುಣಮಟ್ಟಕ್ಕೆ ಆದ್ಯತೆ ನೀಡಲಾಗುತ್ತಿದೆ. ವಿದೇಶಗಳಲ್ಲಿ ನೆಲೆಸಿರುವ ಕನ್ನಡಿಗರೂ ತಮ್ಮ ಊರಿನ ಶಾಲೆಗಳ ಅಭಿವೃದ್ಧಿಗೆ ಆಸಕ್ತಿ ತೋರಿಸುತ್ತಿರುವುದು ಸಂತಸದ ಸಂಗತಿಯಾಗಿದೆ ಎಂದರು.

ದೇಶದಲ್ಲಿರುವ 140 ಅಂತರರಾಷ್ಟ್ರೀಯ ಗುಣಮಟ್ಟದ ಶಾಲೆಗಳ ಪೈಕಿ 38 ಶಾಲೆಗಳು ಕರ್ನಾಟಕದಲ್ಲಿವೆ. ಗ್ರಾಮೀಣ ಭಾಗದಲ್ಲಿಯೇ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರೆತರೆ ಶಿಕ್ಷಣ–ಕ್ಕಾಗಿ ನಗರಗಳಿಗೆ ವಲಸೆ ಬರುವವರ ಸಂಖ್ಯೆ ಕಡಿಮೆಯಾಗಲಿದೆ. ಇದರಿಂದ ಬೆಂಗಳೂರಿನ ಮೇಲಿನ ಜನಸಂಖ್ಯೆ ಮತ್ತು ಸಂಚಾರ ದಟ್ಟಣೆಯ ಒತ್ತಡ ತಗ್ಗಿಸಲು ಸಹಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ಹಳ್ಳಿಗಳಿಂದ ನಗರಗಳಿಗೆ ಬಂದವರು ತಮ್ಮ ಊರಿನ ಶಾಲೆಗಳ ಅಭಿವೃದ್ಧಿಗೆ ಕೊಡುಗೆ ನೀಡಬೇಕು. ಖಾಸಗಿ ಶಾಲೆಗಳ ಆಡಳಿತ ಮಂಡಳಿಗಳು ತಮ್ಮ ಅನುಭವ, ಸಾಮರ್ಥ್ಯ ಮತ್ತು ಸಂಪನ್ಮೂಲಗಳನ್ನು ಸರ್ಕಾರಿ ಶಾಲೆಗಳೊಂದಿಗೆ ಹಂಚಿಕೊಳ್ಳುವ ಮೂಲಕ ಗ್ರಾಮೀಣ ಶಿಕ್ಷಣ ವ್ಯವಸ್ಥೆಯ ಸುಧಾರಣೆಗೆ ಸಹಕರಿಸಬೇಕು ಎಂದು ಡಿ.ಕೆ.ಶಿವಕುಮಾರ್ ಮನವಿ ಮಾಡಿದರು.

ಇಂಟರಾಕ್ಟ್ ಗ್ರೂಪ್ ಸಂಸ್ಥಾಪಕರೊಂದಿಗೆ ಸಚಿವ ಪ್ರಿಯಾಂಕ್ ಖರ್ಗೆ ಚರ್ಚೆ

"ಮುಂಜಾನೆಯ ಮೆರಗು"

ಬೆಂಗಳೂರು ನ, 04– ಪ್ರಾದೇಶಿಕ ಭಾಷೆಗಳಲ್ಲಿ ಕೃತಕ ಬುದ್ಧಿಮತ್ತೆ (AI) ತಂತ್ರಜ್ಞಾನ ಅಭಿವೃದ್ಧಿ ಹಾಗೂ ಡಿಜಿಟಲ್ ಸೇವೆಗಳನ್ನು ಜನಸಾಮಾನ್ಯರಿಗೆ ಸುಲಭವಾಗಿ ತಲುಪಿಸುವ ನಿಟ್ಟಿನಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಬೆಂಗಳೂರು ಮೂಲದ ಇಂಟ–ರಾಕ್ಟ್ ಗ್ರೂಪ್ ಸಂಸ್ಥಾಪಕರನ್ನು ಭೇಟಿ ಮಾಡಿ ಚರ್ಚೆ ನಡೆಸಿದರು.



ಈ ಸಂದರ್ಭದಲ್ಲಿ ಧ್ವನಿ ಆಧಾರಿತ ಸಾಮಾಜಿಕ ತಂತ್ರಜ್ಞಾನ, ಗೇಮಿಂಗ್, ಸಂಭಾಷಣಾತ್ಮಕ ಕೃತಕ ಬುದ್ಧಿಮತ್ತೆ (AI) ಹಾಗೂ ಭಾರತೀಯ ಭಾಷೆಗಳ ತಂತ್ರಜ್ಞಾನ ಕ್ಷೇತ್ರದಲ್ಲಿ ಸಂಸ್ಥೆ ಕೈಗೊಂಡಿರುವ ಕಾರ್ಯಗಳ ಕುರಿತು ಸಚಿವರು ಮಾಹಿತಿ ಪಡೆದರು.

ಇಂಟರಾಕ್ಟ್ ಗ್ರೂಪ್‌ನ ಪ್ರಮುಖ ಆ್ಯಪ್ **'FRND'** ಕನ್ನಡ ಸೇರಿದಂತೆ ಹಲವು ಭಾರತೀಯ ಭಾಷೆಗಳಲ್ಲಿ ಧ್ವನಿ ಸಂಭಾಷಣೆ, ಆಟಗಳು ಹಾಗೂ ನೇರ ಸಂವಹನದ ಮೂಲಕ ಬಳಕೆದಾರರಿಗೆ ತಮ್ಮ ಮಾತೃಭಾಷೆಯಲ್ಲಿಯೇ ಸಂಪರ್ಕ ಸಾಧಿಸಲು ಅವಕಾಶ ಕಲ್ಪಿಸುತ್ತಿದೆ.

ಪ್ರಾದೇಶಿಕ ಭಾಷೆಗಳಲ್ಲಿ ತಂತ್ರಜ್ಞಾನ ಬಳಕೆಯನ್ನು ವಿಸ್ತರಿಸುವುದು, ಸಂಭಾಷಣಾತ್ಮಕ AI ಅಭಿವೃದ್ಧಿಪಡಿಸುವುದು ಹಾಗೂ ಡಿಜಿಟಲ್ ಅನುಭವಗಳನ್ನು ಹೆಚ್ಚಿನ ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಇರುವ ಅವಕಾಶಗಳ ಕುರಿತು ಸಭೆಯಲ್ಲಿ ಆಸಕ್ತಿದಾಯಕ ಚರ್ಚೆ ನಡೆಯಿತು.

ಭಾರತೀಯ ಭಾಷೆಗಳಲ್ಲಿಯೇ ಡಿಜಿಟಲ್ ಸೇವೆಗಳನ್ನು ಬಳಸಲು ಅನುಕೂಲವಾಗುವ ತಂತ್ರಜ್ಞಾನಗಳ ಅಭಿವೃದ್ಧಿಗೆ ಇಂತಹ ಪ್ರಯತ್ನಗಳು ಮಹತ್ವದ ಕೊಡುಗೆ ನೀಡಲಿವೆ ಎಂಬ ಆಶಯ ವ್ಯಕ್ತವಾಯಿತು.

ಪ್ರಜಾಪ್ರಭುತ್ವ ರಕ್ಷಣೆಗೆ ಚಿತ್ರದುರ್ಗದಲ್ಲಿ ಬಿಜೆಪಿ ಬೃಹತ್ ಪಾದಯಾತ್ರೆ

ಕಾಂಗ್ರೆಸ್ ಸರ್ಕಾರದ ಆಡಳಿತ ವೈಖರಿ ವಿರುದ್ಧ ಜನಾಕ್ರೋಶ: ಬಿ.ವೈ.ವಿಜಯೇಂದ್ರ

"ಮುಂಜಾನೆಯ ಮೆರಗು"

ಚಿತ್ರದುರ್ಗ ನ, 04– ರಾಷ್ಟ್ರ ಮಟ್ಟದಲ್ಲಿ ಕಾಂಗ್ರೆಸ್ ಪಕ್ಷದ ನಿಲುವು ಹಾಗೂ ರಾಜ್ಯದ ಕಾಂಗ್ರೆಸ್ ಸರ್ಕಾರದ ಆಡಳಿತ ವೈಖರಿ, ಭ್ರಷ್ಟಾಚಾರ ಮತ್ತು ಜನವಿರೋಧಿ ನೀತಿಗಳನ್ನು ಖಂಡಿಸಿ ಬಿಜೆಪಿ ವತಿಯಿಂದ ಐತಿಹಾಸಿಕ ಕೋಟೆ ನಗರಿ ಚಿತ್ರದುರ್ಗದಲ್ಲಿ 'ಪ್ರಜಾಪ್ರಭುತ್ವ ಉಳಿಸಿ–ಅರಾಜಕತೆ ಅಳಿಸಿ' ಎಂಬ ಘೋಷವಾಕ್ಯದಡಿ ಬೃಹತ್ ಪಾದಯಾತ್ರೆ ಹಮ್ಮಿಕೊಳ್ಳಲಾಯಿತು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹಾಗೂ ರಾಜ್ಯ ಉಸ್ತುವಾರಿ ಹರೀಶ್ ದ್ವಿವೇದಿ ಅವರೊಂದಿಗೆ ಪಾದಯಾತ್ರೆಯಲ್ಲಿ ಪಾಲ್ಗೊಂಡರು.



ಈ ಸಂದರ್ಭದಲ್ಲಿ ಮಾತನಾಡಿದ ವಿಜಯೇಂದ್ರ ಅವರು, ದೇಶದಲ್ಲಿ ಅರಾಜ–ಕತೆ ಸೃಷ್ಟಿಸಲು ಕಾಂಗ್ರೆಸ್ ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದರು. ರಾಜ್ಯದ ಕಾಂಗ್ರೆಸ್ ಸರ್ಕಾರದ ಆಡಳಿತ ವೈಫಲ್ಯ, ಭ್ರಷ್ಟಾಚಾರ ಹಾಗೂ ಜನವಿರೋಧಿ ನೀತಿಗಳ ವಿರುದ್ಧ ಜನರಲ್ಲಿ ಅಸಮಾಧಾನ ವ್ಯಕ್ತವಾಗುತ್ತಿದೆ. ಪಾದಯಾತ್ರೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಹಾಗೂ ಸಾರ್ವಜನಿಕರು ಭಾಗವಹಿಸಿರುವುದು ಸರ್ಕಾರದ ವಿರುದ್ಧದ ಆಕ್ರೋಶಕ್ಕೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಪಾದಯಾತ್ರೆಯಲ್ಲಿ ಮಾಜಿ ಉಪಮುಖ್ಯಮಂತ್ರಿ ಹಾಗೂ ಸಂಸದ ಗೋವಿಂದ ಕಾರಜೋಳ, ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ, ಶಾಸಕರಾದ ಚಂದ್ರಪ್ಪ, ಸುರೇಶ್ ಗೌಡ, ಜ್ಯೋತಿ ಗಣೇಶ್, ಮಾಜಿ ಸಚಿವರಾದ ಬಿ.ಶ್ರೀರಾಮುಲು, ರೇಣುಕಾಚಾರ್ಯ, ವಿಧಾನ ಪರಿಷತ್ ಸದಸ್ಯರಾದ ಎನ್.ರವಿಕುಮಾರ್, ಕೆ.ಎಸ್.ನವೀನ್, ಚಿತ್ರದುರ್ಗ ಜಿಲ್ಲಾಧ್ಯಕ್ಷ ಕೆ.ಟಿ.ಕುಮಾರಸ್ವಾಮಿ, ಸೇರಿದಂತೆ ಪಕ್ಷದ ಹಲವು ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

ತೂಲಹಳ್ಳಿ ಪಂಚಾಯಿತಿ ಸಮಗ್ರ ಅಭಿವೃದ್ಧಿಗೆ ಶಾಸಕ ಡಾ.ಶ್ರೀನಿವಾಸ್‌ಗೆ ಮನವಿ

"ಮುಂಜಾನೆಯ ಮೆರಗು"

ಕೂಡ್ಲಿಗಿ ನ, 04– ತೂಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ಸಮಗ್ರ ಅಭಿವೃದ್ಧಿ ಹಾಗೂ ಸಾರ್ವಜನಿಕರಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವಂತೆ ಆಗ್ರಹಿಸಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮುಖಂಡರು ಶಾಸಕ ಡಾ. ಶ್ರೀನಿವಾಸ್ ಎನ್.ಟಿ. ಅವರಿಗೆ ಮನವಿ ಸಲ್ಲಿಸಿದರು.



ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶಾಸಕರನ್ನು ಭೇಟಿಯಾದ ಮುಖಂಡರು, ಪಂಚಾಯಿತಿ ವ್ಯಾಪ್ತಿಯ ವಿವಿಧ ಗ್ರಾಮಗಳ ಅಭಿವೃದ್ಧಿ ಕಾರ್ಯಗಳ ಕುರಿತು ಚರ್ಚಿಸಿ ಹಲವು ಬೇಡಿಕೆಗಳನ್ನು ಮುಂದಿಟ್ಟರು.

ಗ್ರಾಮೀಣ ಭಾಗದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸುವ ಉದ್ದೇಶದಿಂದ ಸರ್ಕಾರಿ ಶಾಲೆಗಳಲ್ಲಿ ಆಟದ ಮೈದಾನ, ಹೈಟೆಕ್ ಶೌಚಾಲಯ ಹಾಗೂ ಸ್ಮಾರ್ಟ್ ಕ್ಲಾಸ್ ವ್ಯವಸ್ಥೆ ಕಲ್ಪಿಸಬೇಕು. ಅನುದಾನಿತ ಶಾಲೆಗಳಿಗೂ ಆಧುನಿಕ ಸೌಲಭ್ಯಗಳನ್ನು ಒದಗಿಸುವ ಮೂಲಕ ಮಕ್ಕಳಿಗೆ ಉತ್ತಮ ಕಲಿಕಾ ವಾತಾವರಣ ನಿರ್ಮಿಸಬೇಕು ಎಂದು ಮನವಿ ಮಾಡಿದರು.

ತೂಲಹಳ್ಳಿ ಗ್ರಾಮದಲ್ಲಿ ಅತ್ಯಾಧುನಿಕ ರಂಗಮಂದಿರ ನಿರ್ಮಿಸಬೇಕು. ಮರಳುಸಿದ್ದೇಶ್ವರ ಸ್ವಾಮಿ ದೇವಸ್ಥಾನಕ್ಕೆ ಕಂಪೌಂಡ್ ಗೋಡೆ ನಿರ್ಮಿಸುವುದರ ಜೊತೆಗೆ ಚರಂಡಿ ವ್ಯವಸ್ಥೆ ಕಲ್ಪಿಸಬೇಕು. ಸಾರ್ವಜನಿಕರ ಅನುಕೂಲಕ್ಕಾಗಿ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಬೇಕು ಎಂದು ಒತ್ತಾಯಿಸಿದರು.

ಅಲ್ಲದೆ, ತೂಲಹಳ್ಳಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳ ಅಭಿವೃದ್ಧಿಗೆ ಆದ್ಯತೆ ನೀಡಬೇಕು. ಗ್ರಾಮೀಣ ಪ್ರದೇಶಗಳ ಜನರ ದೈನಂದಿನ ಬದು–ಕಿಗೆ ಅನುಕೂಲವಾಗುವಂತೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಬೇಕು ಎಂದು ಶಾಸಕರ ಗಮನ ಸೆಳೆದರು.

ಈ ಸಂದರ್ಭದಲ್ಲಿ ತೂಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಮಕ್ಕಳಲ್ಲಿ ಆತ್ಮವಿಶ್ವಾಸ ತುಂಬಿ ಮುಖ್ಯವಾಹಿನಿಗೆ ತರುವುದು ಎಲ್ಲರ ಜವಾಬ್ದಾರಿ: ಬಿ.ವೈ.ರಾಘವೇಂದ್ರ

"ಮುಂಜಾನೆಯ ಮೆರಗು"

ಶಿಕಾರಿಪುರ ನ, 04– ವಿಶೇಷ ಅಗತ್ಯವುಳ್ಳ ಮಕ್ಕಳಿಗೆ ಅಗತ್ಯ ಸಹಾಯಕ ಸಾಧನಗಳನ್ನು ವಿತರಿಸುವ ಮೂಲಕ ಅವರ ಶಿಕ್ಷಣ ಹಾಗೂ ದೈನಂದಿನ ಬದುಕಿಗೆ ನೆರವಾಗುವ ಸಾರ್ಥಕ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದು ಸಂತಸ ತಂದಿದೆ ಎಂದು ಸಂಸದ ಬಿ.ವೈ.ರಾಘವೇಂದ್ರ ಹೇಳಿದರು.



ಪಟ್ಟಣದ ನವೋದಯ ಪೂರ್ವ ವಿಶ್ವವಿದ್ಯಾಲಯ ಕಾಲೇಜು ಆವರಣದಲ್ಲಿ ಕರ್ನಾಟಕ ಸರ್ಕಾರದ ಶಾಲಾ ಶಿಕ್ಷಣ ಇಲಾಖೆ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ವತಿಯಿಂದ ಆಯೋಜಿಸಲಾಗಿದ್ದ ವಿಶೇಷ ಅಗತ್ಯವುಳ್ಳ ಮಕ್ಕಳಿಗೆ ಸಾಧನ ಸಲಕರಣೆ ವಿತರಣಾ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಕ್ಕಳಿಗೆ ಅಗತ್ಯ ಸಹಾಯಕ ಸಾಧನಗಳನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ವಿಶೇಷ ಚೇತನ ಮಕ್ಕಳಿಗೆ ಸೂಕ್ತ ಸೌಲಭ್ಯ ಮತ್ತು ಅಗತ್ಯ ಸಾಧನಗಳನ್ನು ಒದಗಿಸುವುದರಿಂದ ಅವರಲ್ಲಿ ಸ್ವಾವಲಂಬನೆ ಹಾಗೂ ಆತ್ಮವಿಶ್ವಾಸ ಬೆಳೆಸಲು ಸಾಧ್ಯವಾಗುತ್ತದೆ. ಮಕ್ಕಳನ್ನು ಸಮಾಜದ ಮುಖ್ಯವಾಹಿನಿಗೆ ತರುವುದು ಹಾಗೂ ಅವರ ಶೈಕ್ಷಣಿಕ ಪ್ರಗತಿಗೆ ನೆರವಾಗುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದರು.

ವಿಶೇಷ ಅಗತ್ಯವುಳ್ಳ ಮಕ್ಕಳ ಶಿಕ್ಷಣ ಮತ್ತು ದೈನಂದಿನ ಜೀವನ ಸುಗಮಗೊಳಿಸುವ ಉದ್ದೇಶದಿಂದ ಶಿಕ್ಷಣ ಇಲಾಖೆ ಕೈಗೊಂಡಿರುವ ಈ ಜನಪರ ಕಾರ್ಯ ಶ್ಲಾಘನೀಯವಾಗಿದೆ. ಮಕ್ಕಳೊಂದಿಗೆ ಸಂವಾದ ನಡೆಸಿ ಅವರಿಗೆ ಅಗತ್ಯ ಸಲಕರಣೆಗಳನ್ನು ವಿತರಿಸಿರುವುದು ತೃಪ್ತಿ ತಂದಿದೆ ಎಂದು ತಿಳಿಸಿದರು.

ವಿಶೇಷ ಮಕ್ಕಳ ಸಬಲೀಕರಣ ಮತ್ತು ಸಮಗ್ರ ಶಿಕ್ಷಣಕ್ಕೆ ಇಂತಹ ಕಾರ್ಯಕ್ರಮಗಳು ಮತ್ತಷ್ಟು ಪ್ರೇರಣೆ ನೀಡಲಿವೆ ಎಂದು ಅಭಿಪ್ರಾಯಪಟ್ಟರು.

ಶುದ್ಧ ಕುಡಿಯುವ ನೀರು ಪೂರೈಕೆಗೆ ಆದ್ಯತೆ: ಸಚಿವ ಕೆ.ಎಚ್.ಮುನಿಯಪ್ಪ

"ಮುಂಜಾನೆಯ ಮೆರಗು"

ದೇವನಹಳ್ಳಿ ನ, 04– ಪಟ್ಟಣದ ಕುಡಿಯುವ ನೀರಿನ ಸಮಸ್ಯೆಗೆ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ 360 ಕೆಎಲ್‌ಡಿ ಸಾಮರ್ಥ್ಯದ ನೂತನ ಜಲಶುದ್ಧೀಕರಣ ಘಟಕವನ್ನು ಸಚಿವ ಕೆ.ಎಚ್.ಮುನಿಯಪ್ಪ ಉದ್ಘಾಟಿಸಿದರು.



ದೇವನಹಳ್ಳಿ ಪಟ್ಟಣದ ಕೊಡಿಮಂಚೇನಹಳ್ಳಿ, ಅಕ್ಕುಪೇಟೆ ಹಾಗೂ 23ನೇ ವಾರ್ಡ್‌ನಲ್ಲಿ ಅನುಷ್ಠಾನಗೊಳಿಸಿರುವ ಈ ಯೋಜನೆಯು ಪಟ್ಟಣದ ಜನತೆಗೆ ಶುದ್ಧ ಕುಡಿಯುವ ನೀರು ಪೂರೈಸುವಲ್ಲಿ ಮಹತ್ವದ ಪಾತ್ರ ವಹಿಸಲಿದೆ.

ಪಟ್ಟಣದ ಮೇಲ್ಮೈ ಜಲಮೂಲಗಳ ಜೊತೆಗೆ ಅಲ್ಪ ಆಳದ ಅಂತರ್ಜಲ ಸಂಪನ್ಮೂಲವನ್ನೂ ಸಮರ್ಪಕವಾಗಿ ಬಳಸಿಕೊಳ್ಳುವ ಉದ್ದೇ

ಕನ್ನಡ ಭಾಷೆಗೆ ತನ್ನದೇ ಆದ ಇತಿಹಾಸ, ಪರಂಪರೆ ಮತ್ತು ಶ್ರೀಮಂತ ಸಾಹಿತ್ಯಿಕ ಹಿನ್ನೆಲೆಯಿದೆ: ಶಾಸಕ ಬಿ. ದೇವೇಂದ್ರಪ್ಪ

"ಮುಂಜಾನೆಯ ಮೆರಗು"

ಜಗಳೂರು ನ, 04– ಕನ್ನಡ ಭಾಷೆಗೆ ತನ್ನದೇ ಆದ ಇತಿಹಾಸ, ಸಂಸ್ಕೃತಿ ಹಾಗೂ ಶ್ರೀಮಂತ ಸಾಹಿತ್ಯಿಕ ಪರಂಪರೆಯಿದ್ದು, ಇಂತಹ ಭಾಷೆಯನ್ನು ಉಳಿಸಿ ಬೆಳೆಸುವ ಮಹತ್ತರ ಜವಾಬ್ದಾರಿ ಯುವ ಸಮುದಾಯದ ಮೇಲಿದೆ ಎಂದು ಶಾಸಕ ಬಿ. ದೇವೇಂದ್ರಪ್ಪ ಹೇಳಿದರು.

ಬುಧವಾರ ಹರಪನಹಳ್ಳಿ ತಾಲ್ಲೂಕಿನ ಶ್ರೀ ಕೋಲಶಾಂತೇಶ್ವರ ವಿರಕ್ತ ಮಠದ ಆವರಣದಲ್ಲಿ ಆಯೋಜಿಸಲಾಗಿದ್ದ 6ನೇ ತಾಲ್ಲೂಕು ಮಟ್ಟದ ಕನ್ನಡ ಸಾಹಿತ್ಯ ಸಮ್ಮೇಳನದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕನ್ನಡ ಭಾಷೆ ಸಾವಿರಾರು ವರ್ಷಗಳ ಇತಿಹಾಸ ಹೊಂದಿದ್ದು, ಅನೇಕ ಕವಿಗಳು, ಸಾಹಿತಿಗಳು, ವಚನಕಾರರು ಹಾಗೂ ದಾರ್ಶನಿಕರ ಕೊಡುಗೆಯಿಂದ ಸಮೃದ್ಧವಾಗಿದೆ. ಕನ್ನಡ ಸಾಹಿತ್ಯದ ಬೆಳವಣಿಗೆಯಲ್ಲಿ ಶರಣರು, ದಾಸರು ಹಾಗೂ ಮಹಾನ್ ಸಾಹಿತಿಗಳ ಪಾತ್ರ ಮಹತ್ವದ್ದಾಗಿದೆ. ಇಂತಹ ಶ್ರೀಮಂತ ಭಾಷೆ



ಮತ್ತು ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಕೆಲಸ ನಿರಂತರವಾಗಿ ನಡೆಯಬೇಕು ಎಂದರು.

ಇಂದಿನ ಯುವಜನತೆ ಆಧುನಿಕ ತಂತ್ರಜ್ಞಾನ ಮತ್ತು ಇಂಗ್ಲಿಷ್ ಭಾಷೆಯ ಪ್ರಭಾವದ ನಡುವೆಯೂ ಕನ್ನಡ ಭಾಷೆಯ ಬಗ್ಗೆ ಅಭಿಮಾನ ಬೆಳೆಸಿಕೊಳ್ಳಬೇಕು. ದಿನನಿತ್ಯದ ಬದುಕಿನಲ್ಲಿ ಕನ್ನಡವನ್ನು ಹೆಚ್ಚು ಬಳಸುವುದರ ಜೊತೆಗೆ ಕನ್ನಡ ಸಾಹಿತ್ಯ, ಪುಸ್ತಕ ಓದುವ ಹವ್ಯಾಸ ಹಾಗೂ ಬರವಣಿಗೆಯ ಆಸಕ್ತಿಯನ್ನು ಬೆಳೆಸಿಕೊಳ್ಳಬೇಕು. ಶಾಲಾ–ಕಾಲೇಜು ವಿದ್ಯಾರ್ಥಿಗಳಲ್ಲಿ ಸಾಹಿತ್ಯದ ಅಭಿರುಚಿ ಮೂಡಿಸುವಲ್ಲಿ ಇಂತಹ ಸಮ್ಮೇಳನಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಠದ ಶ್ರೀಗಳು ಆಶೀರ್ವಚನ ನೀಡಿ, ಕನ್ನಡ ಭಾಷೆ ಮತ್ತು ಸಾಹಿತ್ಯದ ಮಹತ್ವವನ್ನು ತಿಳಿಸಿದರು. ಭಾಷೆ ಕೇವಲ ಸಂವಹನದ ಮಾಧ್ಯಮವಲ್ಲ; ಅದು ನಮ್ಮ ಸಂಸ್ಕೃತಿ, ಪರಂಪರೆ ಮತ್ತು ಬದುಕಿನ ಪ್ರತಿಬಿಂಬವಾಗಿದೆ. ಕನ್ನಡ ನಾಡು, ನುಡಿ ಹಾಗೂ ಸಂಸ್ಕೃತಿಯನ್ನು ಗೌರವಿಸುವ ಮನೋಭಾವ ಪ್ರತಿಯೊಬ್ಬರಲ್ಲೂ ಬೆಳೆಯಬೇಕು ಎಂದು ಆಶಿಸಿದರು.

ಸಮ್ಮೇಳನದ ಅಂಗವಾಗಿ ತಾಲ್ಲೂಕಿನಲ್ಲಿ ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಗಣನೀಯ ಕೊಡುಗೆ ನೀಡಿದ ಸಾಹಿತಿಗಳು ಹಾಗೂ ಸಾಧಕರನ್ನು ಶಾಸಕರು ಸನ್ಮಾನಿಸಿದರು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು, ಸಾಹಿತಿಗಳು, ಬರಹಗಾರರು, ಕನ್ನಡಾಭಿಮಾನಿಗಳು, ವಿವಿಧ ಶಾಲಾ–ಕಾಲೇಜುಗಳ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಗ್ರಾಮೀಣ ಭಾಗದ ಧಾರ್ಮಿಕ, ಶುಭ ಸಮಾರಂಭಗಳಲ್ಲಿ ಕೆ.ಪಿ. ಪಾಲಯ್ಯ

"ಮುಂಜಾನೆಯ ಮೆರಗು"

ಜಗಳೂರು ನ, 04– ಜಗಳೂರು ವಿಧಾನಸಭಾ ಕ್ಷೇತ್ರದ ಗ್ರಾಮೀಣ ಭಾಗಗಳಲ್ಲಿ ನಡೆಯುವ ಧಾರ್ಮಿಕ ಹಾಗೂ ಶುಭ ಸಮಾರಂಭಗಳಲ್ಲಿ ಪಾಲ್ಗೊಳ್ಳುವ ಮೂಲಕ ಕೆಪಿಸಿಸಿ ಎಸ್‌ಟಿ ಘಟಕದ ಮಾಜಿ ರಾಜ್ಯಾಧ್ಯಕ್ಷ ಕೆ.ಪಿ. ಪಾಲಯ್ಯ ಅವರು ಗ್ರಾಮಸ್ಥರೊಂದಿಗೆ ಆತ್ಮೀಯತೆ ಹಂಚಿಕೊಂಡರು.



ತಾಲೂಕಿನ ಬಸವಪುರ, ಕೊಡ್ಡದಗುಡ್ಡ, ಮಡ್ರಳ್ಳಿ ಹಾಗೂ ಚಿಕ್ಕಮಲ್ಲನಹೊಳೆ ಗ್ರಾಮಗಳಲ್ಲಿ ಆಯೋಜಿಸಿದ್ದ ವಿವಿಧ ಧಾರ್ಮಿಕ ಮತ್ತು ಶುಭ ಸಮಾರಂಭಗಳಲ್ಲಿ ಅವರು ಭಾಗವಹಿಸಿದರು.

ಈ ಸಂದರ್ಭದಲ್ಲಿ ಶ್ರೀ ಸೇವಾಲಾಲ್ ದೇವರ ಪೂಜಾ ಕಾರ್ಯಕ್ರಮ, ವಿವಾಹ ಸಮಾರಂಭ ಹಾಗೂ ಆರತಿ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ದೇವರ ದರ್ಶನ ಪಡೆದು ಆಶೀರ್ವಾದ ಪಡೆದರು. ನವದಂಪತಿಗಳಿಗೆ ಶುಭ ಹಾರೈಸಿ, ಅವರ ಮುಂದಿನ ವೈವಾಹಿಕ ಜೀವನ ಸುಖಮಯವಾಗಿರಲಿ ಎಂದು ಹಾರೈಸಿದರು.

ನಂತರ ಗ್ರಾಮಸ್ಥರು, ಮುಖಂಡರು ಹಾಗೂ ಕುಟುಂಬದ ಸದಸ್ಯರೊಂದಿಗೆ ಆತ್ಮೀಯವಾಗಿ ಬೆರೆತು ಕುಶಲೋಪರಿ ವಿಚಾರಿಸಿ, ಸಮಾರಂಭಗಳ ಸಂತಸದಲ್ಲಿ ಭಾಗಿಯಾದರು.

ಕಾಂಗ್ರೆಸ್ ಪಕ್ಷದ ತತ್ವ, ಸಿದ್ಧಾಂತ ಮೆಚ್ಚಿ ಇಬ್ಬರು ಮುಖಂಡರು ಸೇರ್ಪಡೆ

"ಮುಂಜಾನೆಯ ಮೆರಗು"

ಜಗಳೂರು ನ, 04– ಕಾಂಗ್ರೆಸ್ ಪಕ್ಷದ ತತ್ವ, ಸಿದ್ಧಾಂತ ಹಾಗೂ ಜನಪರ ಕಾರ್ಯಕ್ರಮಗಳನ್ನು ಮೆಚ್ಚಿ ದೊಣ್ಣೆಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಹಾಗೂ ವಿ.ಎಸ್.ಎಸ್. ಘಟಕದ ಮಾಜಿ ಅಧ್ಯಕ್ಷ ಆರ್. ವಿರೇಶ್ ಮತ್ತು ಅರಿಶಿನಗುಂಡಿ ಹಾಲು ಉತ್ಪಾದಕರ ಸಂಘದ ಕಾರ್ಯದರ್ಶಿ ಬಸವರಾಜ್ ಅವರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು.

ಜಗಳೂರು ವಿಧಾನಸಭಾ ಕ್ಷೇತ್ರದ ಶಾಸಕ ಬಿ. ದೇವೇಂದ್ರಪ್ಪ ಅವರನ್ನು ಭೇಟಿ ಮಾಡಿದ ಇಬ್ಬರೂ ಮುಖಂಡರು ಕಾಂಗ್ರೆಸ್ ಪಕ್ಷದ ಸಿದ್ಧಾಂತಗಳನ್ನು ಒಪ್ಪಿಕೊಂಡು ಪಕ್ಷದ ಸದಸ್ಯತ್ವ ಸ್ವೀಕರಿಸುವ ಮೂಲಕ ಅಧಿಕೃತವಾಗಿ ಕಾಂಗ್ರೆಸ್ ಪಕ್ಷದೊಂದಿಗೆ ಗುರುತಿಸಿಕೊಂಡರು.

ಗ್ರಾಮೀಣ ಭಾಗದಲ್ಲಿ ರಾಜಕೀಯವಾಗಿ ಹಾಗೂ ಸಹಕಾರ ಕ್ಷೇತ್ರದಲ್ಲಿ ಗುರುತಿಸಿಕೊಂಡಿರುವ ಮುಖಂಡರ ಸೇರ್ಪಡೆಯಿಂದ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದ ಸಂಘಟನೆಗೆ ಮತ್ತಷ್ಟು ಬಲ ಬರಲಿದೆ ಎಂಬ ನಿರೀಕ್ಷೆ ವ್ಯಕ್ತವಾಗಿದೆ.

ಈ ಸಂದರ್ಭದಲ್ಲಿ ಶಾಸಕ ಬಿ. ದೇವೇಂದ್ರಪ್ಪ ಅವರು ಪಕ್ಷಕ್ಕೆ ಸೇರ್ಪಡೆಯಾದ ಮುಖಂಡರನ್ನು ಆತ್ಮೀಯವಾಗಿ ಬರಮಾಡಿಕೊಂಡು, ಕಾಂಗ್ರೆಸ್ ಪಕ್ಷದ ಸಂಘಟನೆ ಬಲಪಡಿಸುವಲ್ಲಿ ಕಾರ್ಯಕರ್ತರು ಮತ್ತು ಮುಖಂಡರ ಪಾತ್ರ ಮಹತ್ವದ್ದಾಗಿದೆ. ಪಕ್ಷದ ತತ್ವ ಸಿದ್ಧಾಂತಗಳಿಗೆ ಬದ್ಧರಾಗಿ ಜನರೊಂದಿಗೆ ಬೆರೆತು, ಅವರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಸಂಘಟನಾತ್ಮಕವಾಗಿ ಕೆಲಸ ಮಾಡಬೇಕು ಎಂದು ತಿಳಿಸಿದರು.

ಗ್ರಾಮೀಣ ಪ್ರದೇಶದಲ್ಲಿ ಪಕ್ಷದ ಸಂಘಟನೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದ್ದು, ವಿವಿಧ



ಗ್ರಾಮಗಳ ಮುಖಂಡರು ಹಾಗೂ ಕಾರ್ಯಕರ್ತರು ಕಾಂಗ್ರೆಸ್ ಪಕ್ಷದತ್ತ ಒಲವು ತೋರುತ್ತಿರುವುದು ಸಂಘಟನೆಗೆ ಉತ್ತೇಜನ ನೀಡಿದಂತಾಗಿದೆ.

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರಾದ ನಿಂಗನಹಳ್ಳಿ ಅಜ್ಜಣ್ಣ, ಕಲ್ಲದೇವಪುರ ಮಹೇಶ, ಆಕನೂರು ಪಾತಲಿಂಗಪ್ಪ, ದೊಣ್ಣೆಹಳ್ಳಿ ಸ್ವಾಮಿ, ಬಂಗಾರಿಗುಡ್ಡ ಕರಿಬಸಪ್ಪ, ಜೈರಾಮಪ್ಪ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ರಂಗನಾಥ ಬಡಾವಣೆಯಲ್ಲಿ ಚರಂಡಿ ನೀರು ಸಂಗ್ರಹ ಸೊಳ್ಳೆಗಳ ಉತ್ಪತ್ತಿ ತಾಣವಾಗಿ ಮಾರ್ಪಟ್ಟ ಪ್ರದೇಶ

"ಮುಂಜಾನೆಯ ಮೆರಗು"

ಜಗಳೂರು ನ, 04– ಪಟ್ಟಣದ ರಂಗನಾಥ ಬಡಾವಣೆಯಲ್ಲಿ ಉತ್ತಮ ಚರಂಡಿ ವ್ಯವಸ್ಥೆ ನಿರ್ಮಾಣ ಮಾಡಲಾಗಿದೆಯಾದರೂ, ಚರಂಡಿ ನೀರು ಸರಾಗವಾಗಿ ಹರಿದು ಮತ್ತೊಂದು ಚರಂಡಿಗೆ ಸೇರುವಂತೆ ಸಂಪರ್ಕ ಕಲ್ಪಿಸದಿರುವುದರಿಂದ ನೀರು ಒಂದೇ ಕಡೆ ಸಂಗ್ರಹವಾಗಿ ಹಳ್ಳದೋಪಾದಿಯಲ್ಲಿ ನಿಂತಿದೆ. ಇದರಿಂದ ಬಡಾವಣೆಯ ನಿವಾಸಿಗಳು ತೀವ್ರ ತೊಂದರೆ ಅನುಭವಿಸುವಂತಾಗಿದೆ.



ಬಡಾವಣೆಯಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಚರಂಡಿ ಕಾಮಗಾರಿ ಕೈಗೊಳ್ಳಲಾಗಿದ್ದು, ಮೇಲ್ನೋಟಕ್ಕೆ ಉತ್ತಮ ವ್ಯವಸ್ಥೆ ನಿರ್ಮಾಣವಾದಂತೆ ಕಂಡುಬರುತ್ತದೆ. ಆದರೆ ಚರಂಡಿಯಲ್ಲಿ ಹರಿಯುವ ನೀರು ಮುಂದಿನ ಭಾಗದ ಚರಂಡಿಗೆ ಸಂಪರ್ಕಗೊಳ್ಳದೆ ಅಲ್ಲಿಯೇ ಶೇಖರಣೆಯಾಗುತ್ತಿದೆ. ಇದರಿಂದ ಕೊಳಚೆ ನೀರು ನಿಂತು ದುರ್ವಾಸನೆ ಹರಡುವುದರ ಜತೆಗೆ ಸೊಳ್ಳೆಗಳ ಉತ್ಪತ್ತಿಗೂ ಅನುಕೂಲಕರ ವಾತಾವರಣ ನಿರ್ಮಾಣವಾಗಿದೆ.

ಈ ಭಾಗದಲ್ಲಿ ನೀರು ನಿಂತಿರುವುದರಿಂದ ಸೊಳ್ಳೆಗಳ ಕಾಟ ಹೆಚ್ಚಾಗಿದ್ದು, ಸಾಂಕ್ರಾಮಿಕ ರೋಗಗಳ ಭೀತಿ ಎದುರಾಗಿದೆ. ವಿಶೇಷವಾಗಿ ಮಕ್ಕಳು, ವೃದ್ಧರು ಸೇರಿದಂತೆ ಬಡಾವಣೆಯ ನಿವಾಸಿಗಳು ಆರೋಗ್ಯದ ಆತಂಕದಲ್ಲಿದ್ದಾರೆ. ಸ್ವಚ್ಛತೆ ಮತ್ತು ಆರೋಗ್ಯದ ದೃಷ್ಟಿಯಿಂದ ಚರಂಡಿ ನಿರ್ಮಾಣ ಮಾಡಿದರೂ, ನೀರು ಹರಿದು ಹೋಗಲು ಸೂಕ್ತ ವ್ಯವಸ್ಥೆ ಇಲ್ಲದಿರುವುದು ಕಾಮಗಾರಿಯ ಉದ್ದೇಶವನ್ನೇ ಪ್ರಶ್ನಿಸುವಂತಾಗಿದೆ.

ಗುತ್ತಿಗೆದಾರರು ಕಾಮಗಾರಿ ಪೂರ್ಣಗೊಳಿಸಿ ತೆರಳುವ ಸಂದರ್ಭದಲ್ಲಿ ಚರಂಡಿ ನೀರು ಸಮರ್ಪಕವಾಗಿ ಹರಿದು ಮುಂದಿನ ಚರಂಡಿಗೆ ಸೇರುತ್ತಿದೆಯೇ ಎಂಬುದನ್ನು ಪರಿಶೀಲಿಸಿ ಅಗತ್ಯ ಸಂಪರ್ಕ ಕಲ್ಪಿಸಿದ್ದರೆ ಇಂದು ಇಂತಹ ಸಮಸ್ಯೆ ಎದುರಾಗುತ್ತಿರಲಿಲ್ಲ ಎಂದು ಸ್ಥಳೀಯ ನಿವಾಸಿ ದಸ್ತಗಿರಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸಾರ್ವಜನಿಕರ ತೆರಿಗೆ ಹಣದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವಾಗ ಕೇವಲ ನಿರ್ಮಾಣ ಕಾರ್ಯಕ್ಕೆ ಆದ್ಯತೆ ನೀಡದೆ, ಕಾಮಗಾರಿ ಪೂರ್ಣಗೊಂಡ ಬಳಿಕ ಅದರ ಉಪಯುಕ್ತತೆ ಹಾಗೂ ನೀರು ಸರಾಗವಾಗಿ ಹರಿಯುವ ವ್ಯವಸ್ಥೆಯ ಬಗ್ಗೆಯೂ ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲನೆ ನಡೆಸಬೇಕು. ಇಲ್ಲದಿದ್ದರೆ ಅಭಿವೃದ್ಧಿ ಕಾಮಗಾರಿಗಳೇ ಸಾರ್ವಜನಿಕರಿಗೆ ಸಮಸ್ಯೆಯಾಗಿ ಪರಿಣಮಿಸುವ ಸಾಧ್ಯತೆಯಿದೆ.

ಆದ್ದರಿಂದ ಪಟ್ಟಣ ಪಂಚಾಯಿತಿ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಚರಂಡಿ ನೀರು ನಿಂತಿರುವ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಿ, ಮತ್ತೊಂದು ಚರಂಡಿಗೆ ಸೂಕ್ತ ಸಂಪರ್ಕ ವ್ಯವಸ್ಥೆ ಮಾಡಬೇಕು. ಜತೆಗೆ ಸಂಗ್ರಹವಾಗಿರುವ ಕೊಳಚೆ ನೀರನ್ನು ತೆರವುಗೊಳಿಸಿ ಸೊಳ್ಳೆಗಳ ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಬಡಾವಣೆಯ ನಿವಾಸಿಗಳು ಒತ್ತಾಯಿಸಿದ್ದಾರೆ.



ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ ಪಾದಯಾತ್ರೆ: ಎಸ್.ವಿ. ರಾಮಚಂದ್ರ ಚಿತ್ರದುರ್ಗದಲ್ಲಿ ಬಿಜೆಪಿ ವತಿಯಿಂದ ಲೋಕತಂತ್ರ ಬಚಾವೋ ಅಭಿಯಾನ

"ಮುಂಜಾನೆಯ ಮೆರಗು"

ಜಗಳೂರು ನ, 04– ಭಾರತೀಯ ಜನತಾ ಪಕ್ಷದ ವತಿಯಿಂದ ಚಿತ್ರದುರ್ಗದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿದ್ದ 'ಲೋಕತಂತ್ರ ಬಚಾವೋ ಅಭಿಯಾನ'ದ ಅಂಗವಾಗಿ ನಡೆದ 'ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ' ಪಾದಯಾತ್ರೆಯಲ್ಲಿ ಜಗಳೂರು ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಎಸ್.ವಿ. ರಾಮಚಂದ್ರ ಅವರು ಭಾಗವಹಿಸಿದರು.

ಎಸ್‌ಐಆರ್ (ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ) ವಿರೋಧಿಸಿ ಕಾಂಗ್ರೆಸ್ ಹಾಗೂ ಅದರ ಮಿತ್ರಪಕ್ಷಗಳು ಜನರಲ್ಲಿ ಗೊಂದಲ ಮೂಡಿಸುವ ಪ್ರಯತ್ನ ಮಾಡುತ್ತಿವೆ ಎಂಬ ಬಿಜೆಪಿ ಆರೋಪದ ಹಿನ್ನೆಲೆಯಲ್ಲಿ, ಜನರಲ್ಲಿ



ಜಾಗೃತಿ ಮೂಡಿಸುವ ಉದ್ದೇಶದಿಂದ ಈ ಪಾದಯಾತ್ರೆ ಆಯೋಜಿಸಲಾಗಿತ್ತು.

ದೇಶದಲ್ಲಿ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯುವುದು, ಚುನಾವಣಾ ವ್ಯವಸ್ಥೆಯ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದು ಹಾಗೂ ರಾಜಕೀಯವಾಗಿ ಸುಳ್ಳು ಮಾಹಿತಿ ಹರಡುವ ಪ್ರಯತ್ನಗಳನ್ನು ಖಂಡಿಸುವ ಉದ್ದೇಶದಿಂದ ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರು ಪಾದಯಾತ್ರೆಯಲ್ಲಿ ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯ ಉಸ್ತುವಾರಿ ಹರೀಶ್ ದ್ವಿವೇದಿ, ಮಾಜಿ ಉಪಮುಖ್ಯಮಂತ್ರಿ ಹಾಗೂ ಸಂಸದ ಗೋವಿಂದ ಕಾರಜೋಳ, ಮಾಜಿ ಕೇಂದ್ರ ಸಚಿವರಾದ ಜಿ.ಎಂ. ಸಿದ್ದೇಶ್ವರ ಮತ್ತು ಎ. ನಾರಾಯಣಸ್ವಾಮಿ, ಮಾಜಿ ಸಚಿವ ಬಿ. ಶ್ರೀರಾಮುಲು, ಮಾಜಿ ಶಾಸಕರಾದ ತಿಪ್ಪಾರೆಡ್ಡಿ, ಎಂ.ಪಿ. ರೇಣುಕಾಚಾರ್ಯ, ತಿಪ್ಪೇಸ್ವಾಮಿ, ಶಾಸಕರಾದ ಎಂ. ಚಂದ್ರಪ್ಪ, ಜಿ.ಬಿ. ಜ್ಯೋತಿಗಣೇಶ್, ಬಿ. ಸುರೇಶ್ ಗೌಡ, ಮಾಜಿ ಶಾಸಕ ಹೆಚ್.ಪಿ. ರಾಜೇಶ್, ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್. ನವೀನ್ ಮತ್ತು ಕೆ.ಎಂ. ಸುರೇಶ್, ಜಿಲ್ಲಾ ಬಿಜೆಪಿ ಅಧ್ಯಕ್ಷ ಕೆ.ಟಿ. ಕುಮಾರಸ್ವಾಮಿ, ದಾವಣಗೆರೆ ಜಿಲ್ಲಾ ಬಿಜೆಪಿ ಅಧ್ಯಕ್ಷ ನಾಗರಾಜ್ ಮೆಳ್ಳೇಕಟ್ಟೆ, ಬಿಜೆಪಿ ಮುಖಂಡ ಅನಿತ್ ಕುಮಾರ್ ಸೇರಿದಂತೆ ಪಕ್ಷದ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಧಾರ್ಮಿಕ ಉತ್ಸವಗಳು ಜಾತ್ಯತೀತ ಸಾಮರಸ್ಯಕ್ಕೆ ವೇದಿಕೆಯಾಗಲಿ: ಶಾಸಕ ದೇವೇಂದ್ರಪ್ಪ

"ಮುಂಜಾನೆಯ ಮೆರಗು"

ಜಗಳೂರು, ನ, 04– ಗ್ರಾಮೀಣ ಭಾಗಗಳಲ್ಲಿ ನಡೆಯುವ ಧಾರ್ಮಿಕ ಕಾರ್ಯಕ್ರಮಗಳು ಕೇವಲ ಆಚರಣೆಗಳಿಗೆ ಸೀಮಿತವಾಗದೆ, ಜಾತಿ–ಧರ್ಮದ ಭೇದಭಾವ ಮರೆತು ಜನರನ್ನು ಒಗ್ಗೂಡಿಸುವ ಮೂಲಕ ಸಾಮಾಜಿಕ ಸಾಮರಸ್ಯ, ಸಹಬಾಳ್ವೆ ಹಾಗೂ ಸಹೋದರತ್ವದ ಕೊಂಡಿಗಳಾಗಬೇಕು ಎಂದು ಶಾಸಕ ಬಿ.ದೇವೇಂದ್ರಪ್ಪ ಕರೆ ನೀಡಿದರು.

ತಾಲ್ಲೂಕಿನ ಬಸವಾಪುರ ತಾಂಡಾದಲ್ಲಿ ಶ್ರೀ ಮರಿಯಮ್ಮ ಸೇವಾಲಾಲ್ ದೇವಸ್ಥಾನದ ವಾರ್ಷಿಕೋತ್ಸವದ ಅಂಗವಾಗಿ ಆಯೋಜಿಸಿದ್ದ ಧಾರ್ಮಿಕ ಪೂಜಾ ಕಾರ್ಯಕ್ರಮವನ್ನು ಉದ್ಘಾಟಿಸಿ ಭಕ್ತರನ್ನುದ್ದೇಶಿಸಿ ಅವರು ಮಾತನಾಡಿದರು.

ಗ್ರಾಮೀಣ ಪ್ರದೇಶಗಳಲ್ಲಿ ನಡೆಯುವ ಜಾತ್ರೆ, ಉತ್ಸವ, ದೇವಸ್ಥಾನಗಳ ವಾರ್ಷಿಕೋತ್ಸವ ಹಾಗೂ ಧಾರ್ಮಿಕ ಪೂಜಾ ಕೈಂಕರ್ಯಗಳು ಜನರಲ್ಲಿ ಭಕ್ತಿ ಭಾವನೆ ಮೂಡಿಸುವುದರ ಜತೆಗೆ ಪರಸ್ಪರ ಪ್ರೀತಿ, ವಿಶ್ವಾಸ, ನಂಬಿಕೆ ಮತ್ತು ಸಹೋದರತ್ವವನ್ನು ಗಟ್ಟಿಗೊಳಿಸುತ್ತವೆ. ಇಂತಹ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಗ್ರಾಮಸ್ಥರು ಮಾತ್ರವಲ್ಲದೆ ಸುತ್ತಮುತ್ತಲಿನ ಗ್ರಾಮಗಳ ಜನರು ಕೂಡ ಯಾವುದೇ ಜಾತಿ, ಧರ್ಮದ ಭೇದವಿಲ್ಲದೆ ಪಾಲ್ಗೊಳ್ಳಬೇಕು. ಅನ್ನದಾಸೋಹ, ಪ್ರಸಾದ ವಿತರಣೆ, ಸ್ವಚ್ಛತಾ ಕಾರ್ಯ ಸೇರಿದಂತೆ ವಿವಿಧ ಸೇವಾ ಚಟುವಟಿಕೆಗಳಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಕೈಜೋಡಿಸಬೇಕು. ಇಂತಹ ಕಾರ್ಯಗಳು ಸಮಾಜಕ್ಕೆ ಸಾಮರಸ್ಯದ ಸಂದೇಶ ನೀಡುತ್ತವೆ ಎಂದರು.

ಇತ್ತೀಚಿನ ದಿನಗಳಲ್ಲಿ ಸ್ವಾರ್ಥ ಮನೋಭಾವ ಹಾಗೂ ರಾಜಕೀಯ ಪ್ರೇರಿತ ಕಾರಣಗಳಿಂದ ಸಮಾಜದಲ್ಲಿ ಜಾತಿ ಮತ್ತು ಧರ್ಮದ ಹೆಸರಿನಲ್ಲಿ ಭಿನ್ನಾಭಿಪ್ರಾಯಗಳು



ಸೃಷ್ಟಿಯಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಇಂತಹ ಸಂದರ್ಭದಲ್ಲಿ ಗ್ರಾಮೀಣ ಭಾಗದ ಧಾರ್ಮಿಕ ಪರಂಪರೆಗಳು ಜನರನ್ನು ಬೆಸೆಯುವ ಶಕ್ತಿಯಾಗಿ ಹೊರಹೊಮ್ಮಬೇಕು. ಧರ್ಮದ ಹೆಸರಿನಲ್ಲಿ ಸಮಾಜವನ್ನು ವಿಭಜಿಸುವ ಬದಲು ಧಾರ್ಮಿಕ ಆಚರಣೆಗಳ ಮೂಲಕ ಮಾನವೀಯ ಮೌಲ್ಯಗಳನ್ನು ಬೆಳೆಸುವ ಕೆಲಸವಾಗಬೇಕು ಎಂದು ಅಭಿಪ್ರಾಯಪಟ್ಟರು.

ಲಂಬಾಣಿ ಸಮುದಾಯವು ತನ್ನದೇ ಆದ ವಿಶಿಷ್ಟ ಸಂಸ್ಕೃತಿ, ಸಂಪ್ರದಾಯ ಹಾಗೂ ಆಚರಣೆಗಳನ್ನು ಹೊಂದಿದ್ದು, ದೀಪಾವಳಿ ಹಬ್ಬವನ್ನು ವಿಶೇಷ ರೀತಿಯಲ್ಲಿ ಆಚರಿಸುವ ಪರಂಪರೆಯಿದೆ. ನಮ್ಮ ಪೂರ್ವಜರು ಪಾಲಿಸಿಕೊಂಡು ಬಂದಿರುವ ಸಂಸ್ಕೃತಿ